ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 121

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 18-04-2026

## ಶಾಂತಪುರ ಕ್ರಾಸ್‌ನಲ್ಲಿ ದಾರುಣ ದುರಂತ: ಕಾರು-ಬಸ್ ಡಿಕ್ಕಿಗೆ 6 ಜನ ಸಜೀವ ದಹನ

**ಯಾದಗಿರಿ ಎ 17 :-** ಸುರಪುರ ತಾಲೂಕಿನ ಶಾಂತಪುರ ಕ್ರಾಸ್ ಸಮೀಪ ಭೀಕರ ರಸ್ತೆ ಅಪಘಾತ ಸಂಭವಿಸಿ ಕನಿಷ್ಠ ಆರು ಮಂದಿ ಸಜೀವ ದಹನಗೊಂಡ ದಾರುಣ ಘಟನೆ ಶುಕ್ರವಾರ ನಡೆದಿದೆ. ಅಮಾವಾಸ್ಯ ಪ್ರಯುಕ್ತ ದೇವದು ರ್ಗ ತಾಲೂಕಿನ ಅಂಬೇಡ್ಕರ್ ನಿಗಮ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮ ಅಧಿಕಾರಿಯಾಗಿದ್ದ ಶರಣಬಸವ ನಾಯಕ ಹಾಗೂ ಅವರ ಕುಟುಂ ಬದವರು, ಜೊತೆಗೆ ಸಿರವಾರ ಪಟ್ಟಣ ಪಂಚಾಯತ್ ಸದಸ್ಯ ಕೃಷ್ಣನಾಯಕ ಮತ್ತು ಅವರ ಕುಟುಂಬದವರು ಸುರುಪುರ ಕಡೆಗೆ ತೆರಳುತ್ತಿದ್ದ ವೇಳೆ ಈ ದುರಂತ ಸಂಭವಿಸಿದೆ.

ಅಪಘಾತದಲ್ಲಿ ಒಂದೇ ಕುಟುಂಬದ ಹಲವರು ಮೃತಪಟ್ಟಿರುವುದು ಪ್ರದೇಶದ ಜನರಲ್ಲಿ ತೀವ್ರ ದುಃಖ ಮತ್ತು ಆಕ್ರೋಶಕ್ಕೆ ಕಾರಣ ವಾಗಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಬೆಂಗಳೂರಿನಿಂದ ಕಲಬುರಗಿ ಯತ್ತ ಸಾಗುತ್ತಿದ್ದ ಖಾಸಗಿ ಎಸಿ ಬಸ್ ಹಾಗೂ ಯಾದಗಿ ರಿಯಿಂದ ಲಿಂಗಸೂಗೂರು ಕಡೆಗೆ ಹೊರಟಿದ್ದ ಕಾರಿನ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದೆ. ಡಿಕ್ಕಿಯ ತೀವ್ರತೆಗೆ ಕಾರು ಸಂಪೂರ್ಣ ನಾಶವಾಗಿದ್ದು, ಅದರಲ್ಲಿದ್ದ



ಪ್ರಯಾಣಿಕರು ಹೊರಬರಲು ಸಾಧ್ಯವಾಗದೆ ಬೆಂಕಿಯಲ್ಲಿ ಸಿಲುಕಿಕೊಂಡು ಸಜೀವ ದಹನಗೊಂಡಿದ್ದಾರೆ.

ಅಪಘಾತದ ತೀವ್ರತೆ ಎಷ್ಟಿತ್ತೆಂದರೆ, ಕಾರು ಸಂಪೂರ್ಣ ಕರಕಲಾಗಿದ್ದು, ಮೃತರ ಅವಶೇಷಗಳು ಗುರುತಿಸಲು ಕಷ್ಟವಾಗುವಂತ ಸ್ಥಿತಿ ನಿರ್ಮಾಣವಾಗಿದೆ. ಸ್ಥಳದಲ್ಲಿದ್ದವರು ಹೇಳುವ ಪ್ರಕಾರ, ಡಿಕ್ಕಿ ಆದ ತಕ್ಷಣವೇ ಕಾರಿಗೆ ಬೆಂಕಿ ತಗುಲಿ ಕ್ಷಣಾರ್ಧದಲ್ಲಿ ವ್ಯಾಪಿಸಿದೆ.ಈ ವೇಳೆ ಬಸ್‌ಗೂ ಬೆಂಕಿ ತಗುಲಿದ್ದು, ಅದರಲ್ಲಿ ಪ್ರಯಾಣಿಸುತ್ತಿದ್ದ ಸುಮಾರು 40 ಮಂದಿಯಲ್ಲಿ ಕೆಲವರಿಗೆ ಗಂಭೀರ ಗಾಯಗಳಾಗಿವೆ. ಗಾಯಾಳುಗಳನ್ನು ತಕ್ಷಣ ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸ್ಥಳೀಯರು ತಕ್ಷಣ ರಕ್ಷಣಾ ಕಾರ್ಯಕ್ಕೆ ಮುಂದಾದರೂ, ಕಾರಿನ ಡೋರ್‌ಗಳು ಜಾಮ್ ಆಗಿದ್ದರಿಂದ ಒಳಗಿದ್ದವರನ್ನು ರಕ್ಷಿಸಲು ಸಾಧ್ಯವಾಗಲಿಲ್ಲ. ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸಲು ಹರಸಾಹಸ ಪಟ್ಟರು. ಬಳಿಕ ಮೃತದೇಹಗಳನ್ನು ಹೊರತೆಗೆದು ಗುರುತಿಸುವ ಕಾರ್ಯ ಆರಂಭಿಸಲಾಯಿತು. ಘಟನೆಯ ಮಾಹಿತಿ ತಿಳಿದು ಸುರಪುರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ. ಅಪಘಾತಕ್ಕೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಅತೀ ವೇಗದ ಚಾಲನೆ ಅಥವಾ ತಾಂತ್ರಿಕ ದೋಷವಿರಬಹುದೆಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ.ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮೃತರ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ.

## ಯೋಗೇಶ್ ಗೌಡ ಹತ್ಯೆ:ಶಾಸಕ ವಿನಯ್ ಸೇರಿ 16 ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ



**ಬೆಂಗಳೂರು, ಏ.17-** ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಶಾಸಕ ವಿನಯ್ ಕುಲಕರ್ಣಿ ಸೇರಿದಂತೆ 16 ಮಂದಿ ಆರೋಪಿಗಳಿಗೆ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.
82ನೇ ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಾಧೀಧ ಗಜಾನನಭಟ್ ಇಂದು 16 ಮಂದಿ ಅಪರಾಧಿಗಳಿಗೆ ಶಿಕ್ಷೆಯ ಪ್ರಮಾಣ ಪ್ರಕಟಿಸಿದರು.

ಓರ್ವ ಆರೋಪಿ ಇನ್‌ಸ್ಪೆಕ್ಟರ್ ಚನ್ನಕೇಶವ ಟಿಂಕರಿಕರ್‌ಗೆ 7 ವರ್ಷ ಜೈಲು ಶಿಕ್ಷೆ ವಿಧಿಸಿದ್ದಾರೆ. ಚನ್ನಕೇಶವ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿಲ್ಲ. ಆದರೆ ಭ್ರಷ್ಟಾಚಾರ ಎಸಗಿರುವ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅವರಿಗೆ 7 ವರ್ಷ ಶಿಕ್ಷೆ ವಿಧಿಸಲಾಗಿದೆ. ಹತ್ಯೆಗೀಡಾದ ಯೋಗೇಶ್ ಗೌಡ ಅವರ 2ನೇಪುಟಕ್ಕೆ

## ಅರ್ಥಪೂರ್ಣವಾಗಿ ಶ್ರೀ ಭಗೀರಥ ಜಯಂತಿ ಆಚರಣೆ: ಎಡಿಸಿ ಶಿವಾನಂದ



ಧೈರ್ಯದ ದಾರಿ

**ರಾಯಚೂರು:** ರಾಯಚೂರಿನ ಜಿಲ್ಲಾಡಳಿತದಿಂದ ಏ.23ರಂದು ಅರ್ಥಪೂರ್ಣವಾಗಿ ಶ್ರೀ ಭಗೀರಥ ಜಯಂತಿಯನ್ನು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂಧಿರದಲ್ಲಿ ಆಚರಣೆ ಮಾಡಲಾಗುತ್ತಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.
ಇತ್ತೀಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಭಗೀರಥ ಜಯಂತಿ ಆಚರಣೆ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಶ್ರೀ ಭಗೀರಥ ಮಹರ್ಷಿಗಳ ಸಂದೇಶಗಳನ್ನು ಸಮಾಜಕ್ಕೆ ಸಾರಲು, ಅವರ ಜೀವನ ಮೌಲ್ಯಗಳನ್ನು ಸಮಾಜಕ್ಕೆ ನೀಡುವ ಸಲುವಾಗಿ ಜಯಂತಿ ಆಚರಣೆ ಮಾಡಲಾಗುತ್ತಿದೆ ಎಂದರು.

ಶ್ರೀ ಭಗೀರಥ ಜಯಂತಿಯನ್ನು ಏಪ್ರಿಲ್ 23ರ ಬೆಳಿಗ್ಗೆ 9ಗಂಟೆಗೆ ನಗರದ ಲಕ್ಷ್ಮೀ ವೆಂಕಟೇಶ ದೇವಸ್ಥಾನದಿಂದ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ನಂತರ ಬೆಳಿಗ್ಗೆ 11ಗಂಟೆಗೆ ನಗರದ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸಮುದಾಯದ ಮುಖಂಡರ ಸಲಹೆಯಂತೆ ದಿವ್ಯ ಸಾನಿಧ್ಯ ಹಾಗೂ ವಿಶೇಷ ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಯನ್ನು ಆಹ್ವಾನಿಸಲಾಗುವುದು ಎಂದರು.
ಜಯಂತಿ ಆಚರಣೆ ಕೇವಲ ಒಂದು ಸಮುದಾಯಕ್ಕೆ ಸೀಮಿತವಲ್ಲ. ಎಲ್ಲಾ ಸಮುದಾಯದವರು ಸೇರಿ ಜಯಂತಿ ಆಚರಣೆ ಮಾಡಬೇಕು. ಜಯಂತಿ ಆಚರಣೆಯ ಉದ್ದೇಶ ಮಹನೀಯರ ಆದರ್ಶಗಳನ್ನು ಪಾಲನೆ ಮಾಡುವುದು ಆಗಿದೆ. ಮಹನೀಯರ ತತ್ವ ಆದರ್ಶಗಳನ್ನು ಗುಣಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಎಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.
ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಮುಖಂಡರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ತಹಶೀಲ್ದಾರ್‌ರಿಂದ ಮನೆಗಳ ಪಟ್ಟಿ ಮತ್ತು ಮನೆಗಣತಿಗೆ ಚಾಲನೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯ ಅವರಣದಲ್ಲಿ ಗುರುವಾರ ತಹಶೀಲ್ದಾರ್ ಭೀಮರಾಯ ರಾಮಸಮುದ್ರ ಭಾರತದ ಜನಗಣತಿ 2027 ರ ಮಾನ್ವಿ ತಾಲೂಕಿನ ಗ್ರಾಮೀಣ ವಿಭಾಗದ ಮನೆಗಳ ಪಟ್ಟಿ ಮತ್ತು ಮನೆಗಣತಿ ಪ್ರಾರಂಭಕ್ಕೆ ಚಾಲನೆ ನೀಡಿ ಮಾತನಾಡಿ ಏ.1 ರಿಂದ ಏ.15 ರವರೆಗೆ ಸಾರ್ವಜನಿಕರಿಗೆ ತಮ್ಮ ಗಣತಿಯನ್ನು ತಾವೆ ಸ್ವಯಂ ಮಾಡಿಕೊಳ್ಳುವುದಕ್ಕೆ ಅವಕಾಶ ನೀಡಲಾಗಿತು. ಮಾನ್ವಿ ತಾಲೂಕಿನ ಗ್ರಾಮೀಣ ವಿಭಾಗದಲ್ಲಿ 38 ಜನ ಗಣತಿ ಮೇಲ್ವಿಚಾರಕರ ಹಾಗೂ 239 ಗಣತಿದಾರರ ವ್ಯಾಪ್ತಿಯಲ್ಲಿ ಅಂದಾಜು 9 ಸಾವಿರಕ್ಕೂ ಹೆಚ್ಚು ನಾಗರಿಕರು ತಮ್ಮ ಮೋಬೈಲ್ ಗಳನ್ನು ಬಳಸಿಕೊಂಡು ತಾವೆ ಸ್ವಯಂ ಗಣತಿಯನ್ನು ದಾಖಲಿಸಿಕೊಂಡಿದ್ದಾರೆ. ಭಾರತದ ಜನಗಣತಿ 2027ರ ಮೊದಲ ಹಂತದಲ್ಲಿ ಏ.16ರಿಂದ ಮೇ. 15 ರವರೆಗೆ ಒಟ್ಟು 30 ದಿನಗಳಕಾಲ ಮಾನ್ವಿ ತಾಲೂಕಿನ ಗ್ರಾಮೀಣ ವಿಭಾಗದ ಮನೆಗಳ ಪಟ್ಟಿ ಮತ್ತು ಮನೆಗಣತಿಯನ್ನು ಗಣತಿದಾರರು ಮಾಡಿಕೊಂಡು ಮನೆಗಳಲ್ಲಿ ವಾಸ ಮಾಡುತ್ತಿರುವವರ 34 ಅಂಶಗಳ ಮಾಹಿತಿಯನ್ನು ಪಡೆದುಕೊಂಡು ದಾಖಲಿಸಿಕೊಳ್ಳುವ ಮೂಲಕ ಜನಗಣತಿಯನ್ನು ಯಶಸ್ವಿಗೊಳಿಸುವಂತೆ ಕೋರಿದರು.

ಮಾನ್ವಿ ತಾಲೂಕಿನ ಗ್ರಾಮೀಣ ವಿಭಾಗದ ಗಣತಿ ಮೇಲ್ವಿಚಾರಕರು ಹಾಗೂ ಗಣತಿದಾರರು ಭಾಗವಹಿಸಿದರು.

## ಅಧಿಕ ಉಷ್ಣಾಂಶ ಹಿನ್ನಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸಲು ಪ್ರಭಾರ ಜಿಲ್ಲಾಧಿಕಾರಿ ಈಶ್ವರ ಕುಮಾರ ಕಾಂದೂ ಸಲಹೆ

ಧೈರ್ಯದ ದಾರಿ

**ರಾಯಚೂರು :** ಭಾರತೀಯ ಹವಾಮಾನ ಇಲಾಖೆಯ ವರದಿಯ ಪ್ರಕಾರ ರಾಯಚೂರು ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆಯಿದ್ದು, ಬಿಸಿ ಗಾಳಿ (ಹೀಟ್ ವೇವ್) ಎಚ್ಚರಿಕೆ ನೀಡಲಾಗಿದೆ. ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಭಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಕೋರಿದ್ದಾರೆ.
ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಏನು ಮಾಡಬೇಕು ಎಂಬುದರ ಕುರಿತು ಮಾಹಿತಿಯನ್ನು ನೀಡಿದ್ದಾರೆ.
ಸಾರ್ವಜನಿಕರು ರೇಡಿಯೋ,ಟಿವಿ, ದಿನ ಪತ್ರಿಕೆಗಳಲ್ಲಿ ಬಿಸಿಲಿನ ತಾಪಮಾನದ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳಬೇಕು. ಬಾಯಾರಿಕೆಯಿಲ್ಲದಿದ್ದರೂ ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯುವುದು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸುವುದು, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು.
ಬಿಸಿಲಿನಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಬೂಟುಗಳು ಅಥವಾ ಚಪ್ಪಲಗಳನ್ನು ಬಳಸಿ. ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ, ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ ಪ್ರಯಾಣ ಮಾಡುವಾಗ ನಿಮ್ಮೊಂದಿಗೆ ನೀರನ್ನು ತೆಗೆದುಕೊಂಡು ಹೋಗುವುದು. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಬೇಕು.
ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು



ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ. ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಿ. ಆದಷ್ಟು ಫ್ಯಾನಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ. ಕೆಲಸದ ಸಮಯವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಬೇಕು.
ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು. ಕಲ್ಲಂಗಡಿ, ಕರಬೂಜ, ಕಿತ್ತಳೆ ದ್ರಾಕ್ಷಿ, ಅನನಾಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು. ನವಜಾತ ಶಿಶುಗಳು, ಹಿರಿಯ ನಾಗರಿಕರು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಅರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು.
ಸಾರ್ವಜನಿಕರು ಏನು ಮಾಡಬಾರದು: ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬೇಡಿ. ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅವರಿಗೆ ಹಾಗೂ ಅವುಗಳಿಗೆ ಅಪಾಯಕಾರಿಯಾಗಬಹುದು. ಕಪ್ಪು ಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಬೇಕು. ಹೊರಗಿನ ತಾಪಮಾನ 2ನೇಪುಟಕ್ಕೆ

## ತಾಲೂಕು ಪಂಚಾಯಿತಿಯಿಂದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಹಾಯವಾಣಿ ಕೇಂದ್ರ ಪ್ರಾರಂಭ: ಖಾಲೀದ್ ಅಹ್ಮದ್

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಉಂಟಾಗುವ ಕುಡಿಯುವ ನೀರಿನ ಸಮಸ್ಯೆ,ದೂರುಗಳನ್ನು ದಾಖಲಿಸಿ, ಪರಿಹರಿಸಲು ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಿ ತಾ.ಪಂ. ಇ,ಓ. ಖಾಲೀದ್ ಅಹ್ಮದ್ ಮಾತನಾಡಿ ಸಾರ್ವಜನಿಕರು ದೂ.ಸಂಖ್ಯೆ 08538-221551 ಗೆ ಬೆಳಿಗ್ಗೆ 8 ಗಂಟೆಯಿಂದ ಸಂಜೆ 5.30 ರವರೆಗೆ ಕರೆ ಮಾಡಿ ತಮ್ಮಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ದಾಖಲಿಸಬಹುದಾಗಿದೆ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.



ಮೊದಲನೇ ಪುಟದಿಂದ

## ಅಧಿಕ ಉಷ್ಣಾಂಶ ಹಿನ್ನಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸಲು ಪ್ರಭಾರ ಜಿಲ್ಲಾಧಿಕಾರಿ ಈಶ್ವರ ಕುಮಾರ ಕಾಂದೂ ಸಲಹೆ

ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಬೇಕು. ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ. ಬಿಸಿಲಿನ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಿ. ಅಡಿಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಬೇಕು. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ಪಾನೀಯಗಳನ್ನು ಸೇವಿಸಬೇಡಿ. ಇವು ಹೊಟ್ಟೆ ನೋವನ್ನು ಉಂಟು ಮಾಡುತ್ತದೆ. ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬಾರದು. ಅಲ್ಲದೆ ಚಪ್ಪಲಿ ಧರಿಸದೆ ಹೊರಹೋಗುವ ಅಭ್ಯಾಸವನ್ನು ತಪ್ಪಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಭಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಯೋಗೇಶ್ ಗೌಡ ಹತ್ಯೆ:ಶಾಸಕ ವಿನಯ್ ಸೇರಿ 16 ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ

ಮಕ್ಕಳಿಗೆ 16 ಲಕ್ಷ ರೂ ಪರಿಹಾರ ನೀಡುವಂತೆ ನ್ಯಾಯಾಲಯ ಸೂಚನೆ ನೀಡಿದೆ.

2016ರಲ್ಲಿ ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಯೋಗೇಶ್ ಗೌಡ ಅವರ ಕೊಲೆಯಾಗಿತ್ತು. ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಸೇರಿ ಒಟ್ಟು 21 ಮಂದಿ ಮೇಲೆ ಆರೋಪ ಕೇಳಿ ಬಂದಿತ್ತು. ಪ್ರಕರಣವನ್ನು ಬಿಜೆಪಿ ಸರ್ಕಾರ ಸಿಬಿಐಗೆ ಒಪ್ಪಿಸಿತ್ತು.

ಈ ಬಗ್ಗೆ ಸಮಗ್ರ ತನಿಖೆ ನಡೆಸಿದ್ದ ಸಿಬಿಐ ಚಾರ್ಜ್‌ಶೀಟ್ ಸಲ್ಲಿಸಿತ್ತು. 10 ವರ್ಷಗಳ ನಿರಂತರ ತನಿಖೆ, ವಿಚಾರಣೆ ಬಳಿಕ ಕೊಲೆ, ಕ್ರಿಮಿನಲ್ ಸಂಚು, ಸಾಕ್ಷ್ಯನಾಶ, ಮಾರಕಾಸ್ತ್ರಗಳಿಂದ ಹಲ್ಲೆ, ಅಕ್ರಮ ಕೂಟ ಆರೋಪದಡಿ ದೋಷಿ ಎಂದು ಜನಪ್ರತಿನಿಧಿಗಳ ಕೋರ್ಟ್ ಆದೇಶಿಸಿತ್ತು.

ಸೋಮಶೇಖರ್ ನ್ಯಾಮಗೌಡ ಹಾಗೂ ವಾಸುದೇವ್ ನಿಲೇಕಣಿಯನ್ನ ಕೋರ್ಟ್ ಖುಲಾಸೆಗೊಳಿತ್ತು. ಇನ್ನು ಇಬ್ಬರು ನಿರ್ದೋಷಿಗಳನ್ನ ಬಿಟ್ಟು ಉಳಿದವರನ್ನು ಸಿಬಿಐ ವಶಕ್ಕೆ ಪಡೆದಿತ್ತು. ಬಳಿಕ ಬೌರಿಂಗ್ ಆಸ್ಪತ್ರೆಯಲ್ಲಿ 17 ಅಪರಾಧಿಗಳ ವೈದ್ಯಕೀಯ ಪರೀಕ್ಷೆ ನಡೆಸಿ ಪರಪ್ಪನ ಅಗ್ರಹಾರಕ್ಕೆ ವರ್ಗಾವಣೆ ಮಾಡಲಾಗಿತ್ತು.

ನಿನ್ನೆ ಶಿಕ್ಷೆಯ ಪ್ರಮಾಣ ಕುರಿತಂತೆ ಎರಡೂ ಕಡೆ ವಾದ ಪ್ರತಿವಾದ ಆಲಿಸಿದ್ದ ನ್ಯಾಯಾಧೀಶರು ಇಂದು ಶಿಕ್ಷೆಯ ಪ್ರಮಾಣ ಪ್ರಕಟಿಸುವುದಾಗಿ ಹೇಳಿದ್ದರು.

## ಇನ್ನು ಮುಂದೆ ನೇಚರ್‌ಗೈಡ್ ಇಲ್ಲದೆ ಚಾರಣಕ್ಕೆ ಅವಕಾಶ ಇಲ್ಲ : ಸಚಿವ ಖಂಡ್ರೆ



**ಬೆಂಗಳೂರು,ಏ.17–** ರಾಜ್ಯದಲ್ಲಿ ಅರಣ್ಯ ಇಲಾಖೆ ವ್ಯಾಪ್ತಿಗೆ ಒಳಪಡುವ ಎಲ್ಲಾ ಅನುಮೋದಿತ ಚಾರಣ ಪಥಗಳಲ್ಲಿ ಇನ್ನು ಮುಂದೆ ಪ್ರಕೃತಿ ಮಾರ್ಗದರ್ಶಕ (ನೇಚರ್ ಗೈಡ್) ಇಲ್ಲದೆ ಚಾರಣಕ್ಕೆ ಅವಕಾಶ ಇರುವುದಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಚಾರಣಿಗರ ಸುರಕ್ಷತೆಗಾಗಿ ರೂಪಿಸಲಾಗಿರುವ ಪ್ರಮಾಣಿತ ಕಾರ್ಯಾಚರಣೆ ವಿಧಾನ(ಎಸ್.ಓ.ಪಿ.) ಬಿಡುಗಡೆ ಮಾಡಿ ಮಾತನಾಡಿದ ಅವರು, ಪ್ರತಿ 10 ಚಾರಣಿಗರಿಗೆ ಒಬ್ಬರು ಸ್ಥಳೀಯ ಪ್ರಕೃತಿ ಮಾರ್ಗದರ್ಶಕರಿರುತ್ತಾರೆ. ಎಲ್ಲ ಚಾರಣ ಪಥಗಳಲ್ಲಿ ಒಮ್ಮೆಗೆ ಗರಿಷ್ಠ 150 ಜನರಿಗೆ ಮಾತ್ರ ಸೀಮಿತಗೊಳಿಸಲಾಗುವುದು ಎಂದರು.

ಚಾರಣಕ್ಕೆ ಬರುವವರು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳುವುದು ಕಡ್ಡಾಯ. ಒಂದೊಮ್ಮೆ ಯಾವುದೇ ದಿನ ಒಬ್ಬರೇ ಚಾರಣಿಗರು ನೋಂದಾಯಿಸಿದ್ದರೂ ಗೈಡ್ ಸೌಲಭ್ಯ ಕಲ್ಪಿಸಲಾಗುವುದು, ಗೈಡ್ ಇಲ್ಲದೆ ಚಾರಣಕ್ಕೆ ಅವಕಾಶ ಇರುವುದಿಲ್ಲ ಎಂದರು.

ಇತ್ತೀಚೆಗೆ ಕೊಡಗಿನ ತಡಿಯಾಂಡಮೋಳ್ ಬೆಟ್ಟದಲ್ಲಿ ಕೇರಳದಿಂದ ಚಾರಣಕ್ಕೆ ಬಂದಿದ್ದ ಮಹಿಳೆ ನಾಪತ್ತೆಯಾಗಿ ಕಾಡಿನಲ್ಲಿ 3 ದಿನ ಕಳೆಯುವಂತಾದ ಹಾಗೂ ಅರಣ್ಯ ವ್ಯಾಪ್ತಿಗೆ ಒಳಪಡದ ಚಿಕ್ಕಮಗಳೂರಿನ ಮಾಣಿಕ್ಯಧಾರಾ ಬಳಿ ನಾಪತ್ತೆಯಾಗಿ ಶವವಾಗಿ ಬಾಲಕಿ ಪತ್ತೆಯಾದ ಹಿನ್ನೆಲೆಯಲ್ಲಿ ಚಾರಣಿಗರ ಸುರಕ್ಷತೆಗಾಗಿ ಈ ಎಸ್.ಓ.ಪಿ. ರೂಪಿಸಲು ಸೂಚಿಸಿದ್ದಾಗಿ ಅವರು ತಿಳಿಸಿದರು.

ಜಿಪಿಎಸ್ ಅಳವಡಿಸಿದ ವಾಕಿಟಾಕಿ :

ಇನ್ನು ಮುಂದೆ ಪ್ರತಿಯೊಂದು ಚಾರಣಪಥದಲ್ಲೂ ನೇಚರ್ ಗೈಡ್‌ಗಳಿಗೆ ಜಿ.ಪಿ.ಎಸ್. ಅಳವಡಿಸಿದ ವಾಕಿಟಾಕಿಯನ್ನು ಕಡ್ಡಾಯವಾಗಿ ನೀಡಲಾಗುವುದು. ಅದೇ ರೀತಿ ಪ್ರತಿಯೊಬ್ಬ ಚಾರಣಿಗರ ಮೊಬೈಲ್‌ಗೆ ಚಾರಣಪಥದ ನಕ್ಷೆ ಸಹಿತ ಆಪ್ ಅನ್ನು ಅಳವಡಿಸಲಾಗುವುದು. ಅಕಸ್ಮಾತ್ ಯಾರೇ ಚಾರಣಿಗರು ದಾರಿ ತಪ್ಪಿದರೂ ಅವರ ಶೋಧಕ್ಕೆ ಈ ಆಪ್ ಸಹಕಾರಿಯಾಗಲಿದೆ ಎಂದರು.

ಬೇಸ್ ಕ್ಯಾಂಪ್‌ನಲ್ಲಿ ಮೂಲಸೌಕರ್ಯ :

ಚಾರಣ ಆರಂಭಕ್ಕೂ ಮುನ್ನ ಮೂಲ ನೆಲೆಯಲ್ಲಿ ಚಾರಣಿಗರಿಗೆ ಸಂಕ್ಷಿಪ್ತವಾಗಿ ಚಾರಣದ ದೂರ, ಅವಧಿ ಮತ್ತು ಅಲ್ಲಿನ ಪರಿಸ್ಥಿತಿಯ ಬಗ್ಗೆ ಮಾಹಿತಿ ನೀಡಲಾಗುವುದು. ಅದೇ ರೀತಿ ವನ್ಯಜೀವಿಗಳು ಎದುರಾದರೆ ಏನು ಮಾಡಬೇಕು ಎಂದೂ ತಿಳಿಸಲಾಗುವುದು. ಹೆಚ್ಚು ಶಬ್ದ ಮಾಡುವ ಯಾವುದೇ ಸಾಧನಗಳಿಗೆ, ಹರಿತವಾದ ಲೋಹದ ವಸ್ತು, ಆಯುಧಗಳನ್ನು ತೆಗೆದುಕೊಂಡು ಹೋಗಲು ಮತ್ತು ಕ್ಯಾಂಪ್ ಫೈರ್ ಮಾಡಲು ಚಾರಣ ಪಥದಲ್ಲಿ ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಚಾರಣಿಗರಿಗೆ ಮೂಲ ನೆಲೆಯಲ್ಲಿ ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು. ಚಾರಣ ಪಥದಲ್ಲಿ ಬೇಸ್ ಕ್ಯಾಂಪ್ ಗೆ ಹೋಗುವ ಮಾರ್ಗಸೂಚಿ, ಬಾಣದಾಕಾರದ ಗುರುತು ಹಾಕಲಾಗುವುದು. ಮಾರ್ಗಮಧ್ಯೆ ವಿರಮಿಸಿಕೊಳ್ಳಲು ವಿಶ್ರಾಂತಿ ತಾಣ ಮಾಡಲಾಗುವುದು ಎಂದರು.

ಗೈಡ್‌ಗಳಿಗೆ ಹೊಣೆಗಾರಿಕೆ :

ಇನ್ನು ಮುಂದೆ ಪ್ರಕೃತಿ ಮಾರ್ಗದರ್ಶಕರು (ಗೈಡ್)ಗಳು ಯಾವುದೇ ಚಾರಣಿಗ ತಮಗಿಂತ ಮುಂದೆ ಹೋಗಿಲ್ಲ ಹಾಗೂ ಹಿಂದೆ ಉಳಿದಿಲ್ಲ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಬೇಸ್ ಕ್ಯಾಂಪ್, ವಿಶ್ರಾಂತಿ ತಾಣಗಳಲ್ಲಿ ಕಡ್ಡಾಯವಾಗಿ ಚಾರಣಿಗರ ಎಣಿಕೆ ಮಾಡಬೇಕು. ಪ್ರತಿ ಅರ್ಧಗಂಟೆಗೊಮ್ಮೆ ತಮ ವಾಕಿ ಟಾಕಿ ಮೂಲಕ ಬೇಸ್ ಕ್ಯಾಂಪ್‌ನೊಂದಿಗೆ ಸಂವಹನ ನಡೆಸಬೇಕು. ಚಾರಣಿಗರ ಜವಾಬ್ದಾರಿ ಹೊರುವಂತೆ ಅವರಿಗೆ ಹೊಣೆಗಾರಿಕೆ ನೀಡಲಾಗುವುದು. ಚಾರಣ ಆರಂಭವಾದ ಒಂದು ಗಂಟೆಯೊಳಗೆ ವಾಕಿ ಟಾಕಿ ಸಂವಹನ ಗೈಡ್ ಕಡೆಯಿಂದ ನಡೆಯದಿದ್ದರೆ ಬೇಸ್ ಕ್ಯಾಂಪ್ ಸಿಬ್ಬಂದಿಯೇ ಕರೆ ಮಾಡಿ ಖಚಿತಪಡಿಸಿಕೊಳ್ಳುತ್ತಾರೆ ಎಂದರು.

ಅಪ್ರಾಪ್ತ ವಯಸ್ಕರಿಗೆ ಪೋಷಕರ ಅನುಮತಿ ಅಗತ್ಯ:

ಅಪ್ರಾಪ್ತ ವಯಸ್ಕರು ಚಾರಣಕ್ಕೆ ತೆರಳಲು ಅವರ ಪಾಲಕರ, ಪೋಷಕರ ಅನುಮತಿ ಪತ್ರ ಕಡ್ಡಾಯ. ಅದೇ ರೀತಿ ಹಿರಿಯ ನಾಗರಿಕರು ಚಾರಣ ಕೈಗೊಳ್ಳಲು ತಮ ದೈಹಿಕ ಸಾಮರ್ಥ್ಯ ಮತ್ತು ಸದೃಢತೆಯ ಪ್ರಮಾಣ ಪತ್ರ ಒದಗಿಸಬೇಕಾಗುತ್ತದೆ ಎಂದರು.

ಯಾವುದೇ ಚಾರಣಿಗರಿಗೆ ಆರೋಗ್ಯ ಸಮಸ್ಯೆಯಾದರೆ ಅವರ ಆರೈಕೆಗಾಗಿ ಗೈಡ್ ತಮ ಜೊತೆ ಪ್ರಥಮ ಚಿಕಿತ್ಸಾಕಿಟ್ ಅನ್ನು ತೆಗೆದುಕೊಂಡು ಹೋಗಬೇಕಾಗುತ್ತದೆ. ಫ್ಲಾಶ್ ಬಳಸಿ ಫೋಟೋ ತೆಗೆಯುವುದನ್ನು, ಏಕ ಬಳಕೆ ಪ್ಲಾಸ್ಟಿಕ್ ಹಾಗೂ ಕ್ಯಾರಿ ಬ್ಯಾಗ್ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಅದೇ ರೀತಿ ತ್ಯಾಜ್ಯವನ್ನು ಚಾರಣಿಗರು ತಂದು ಬೇಸ್ ಕ್ಯಾಂಪ್‌ನಲ್ಲೇ ವಿಲೇವಾರಿ ಮಾಡಬೇಕು. ಇದೆಲ್ಲವೂ ಎಸ್.ಓ.ಪಿಯಲ್ಲಿದೆ ಎಂದರು.

ಅರಣ್ಯ ವಿಹಾರತಾಣದಲ್ಲಿ ಎಲ್ಲ ಚಾರಣಪಥ :

ಅರಣ್ಯ ಇಲಾಖೆ ವ್ಯಾಪ್ತಿಯ ಚಾರಣ ಪಥಗಳ ಮುಂಗಡ ಟಿಕೆಟ್ ಕಾಯ್ದಿರಿಸಲು ಅವಕಾಶ ಆಗುವಂತೆ ಎಲ್ಲ ಚಾರಣಪಥಗಳನ್ನೂ :https://aranyavihaara.karnataka.gov.in/ ಅಂತರ್ಜಾಲ ತಾಣದಲ್ಲಿ ಸೇರ್ಪಡೆ ಮಾಡುವಂತೆ ಸೂಚನೆ ನೀಡಿರುವುದಾಗಿಯೂ ಅರಣ್ಯ ಸಚಿವ ಈಶ್ವರ ಖಂಡ್ರೆ ಇದೇ ಸಂದರ್ಭದಲ್ಲಿ ತಿಳಿಸಿದರು.

ಕೆಲವೇ ದಿನಗಳಲ್ಲಿ ಎಸ್.ಓ.ಪಿ. ಸಿದ್ಧಪಡಿಸಿರುವ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಈಶ್ವರ ಖಂಡ್ರೆ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್, ಎಪಿಸಿಸಿಎಫ್ ಬಿಸ್ವಜಿತ್ ಮಿಶ್ರ ಹಾಗೂ ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

## ಪಕ್ಷಿಗಾಗಿ ನೀರಿನ ಅರವಟಿಗೆ ನಿರ್ಮಿಸಿದ ಯುವಕರು

**ತಾಳಿಕೋಟೆ:ಏ.17:** ಇಂದಿನ ತಂತ್ರಜ್ಞಾನ ಯುಗದ ಹೊಡೆತಕ್ಕೆ ಪಕ್ಷಿ ಸಂಕುಲವು ನಡುಗಿಹೋಗಿರುವದನ್ನು ನಾವು ಕಾಣುತ್ತೇವೆ ಆದರೆ ಅವುಗಳನ್ನು ಉಳಿಸಿ ಬೆಳೆಸುವ ಗೋಜಿಗೆ ಹೋಗಲು ಯಾರಲ್ಲೂ ಕೂಡಾ ಸಮಯವಿಲ್ಲಾ ತಮಗೆ ಸಮಯಸಿಕ್ಕಾಗಲೆಲ್ಲಾ ಸಮಾಜಮುಖಿ ಕಾರ್ಯದಲ್ಲಿ ತೊಡಗುತ್ತಾ ಸಾಗಿರುವ ಸಂಘಟಿತ ಯುವ ಸಮೂಹವು ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಸಿದ್ದಲಿಂಗಶ್ರೀಗಳ ಪ್ರೇರಣೆಯ ಮೇರೆಗೆ ಪಕ್ಷಿ ಸಂಕುಲ ರಕ್ಷಣೆಗಾಗಿ ವಿನೋತನ ಹೆಜ್ಜೆ ಇಟ್ಟಿದೆ.



ಬಾಲಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಚಟಮುಕ್ತ ಸಮಾಜ ನಿರ್ಮಾಣಕ್ಕಾಗಿ ಅಜ್ಜನ ನಡಿಗೆ ಹಳ್ಳಿ ಕಡೆಗೆ ಎಂಬ ವಿನೂತನ ಕಾರ್ಯಕ್ರಮದಲ್ಲಿ ಪ್ರಾಣಿ ಪಕ್ಷಿಗಳ ಸಂಕುಲ ಉಳಿವಿಗೆ ಯುವ ಸಮೂಹ ಮುಂದಾಗಬೇಕೆಂಬುದರ ಕುರಿತು ತಿಳಿಹೇಳುತ್ತಾ ಸಾಗಿದ್ದನ್ನು ಪ್ರೇರೆಪಿಸಿಕೊಂಡ ತಾಲೂಕಿನ ಗಡಿ ಸೋಮನಾಳ ಗ್ರಾಮದ ಶ್ರೀ ಬಸವ ಚೇತನ ಗ್ರಾಮೀಣಾಭಿವೃದ್ಧಿ ಸಂಘದ ಯುವ ಸಮೂಹವು ಪಕ್ಷಿ ಸಂಕುಲ ಉಳಿವಿಗೆ ಸಾವಿರಾರು ನಿರುಪಯುಕ್ತ ಬಾಟಲಿಗಳ ಬಳಕೆಯೊಂದಿಗೆ ಕುಡಿಯುವ ನೀರಿನ ಅರವಟಿಗೆ ನಿರ್ಮಿಸಿ ಮಾದರಿಯ ಕಾರ್ಯಕ್ಕೆ ಮುಂದಾಗಿದೆ.

ಯಾವು ನಿರೂಪಯುಕ್ತವೋ ಅವುಗಳನ್ನು ಮರುಬಳಿಕೆ ಮಾಡುವದರ ಜೊತೆಗೆ ಉಪಯೋಗಕ್ಕೆ ಬರುವಂತೆ ಮಾಡಿ ಪಕ್ಷಿ ಜೀವ ಸಂಕುಲವನ್ನು ಉಳಿಸಿ ಬೆಳೆಸಲು ಯುವಕರ ತಂಡವು ಪ್ರಥಮವಾಗಿ ಗ್ರಾಮದಲ್ಲಿರುವ ಗಿಡ ಮರಗಳಿಗೆ ಅರಣ್ಯ ಇಲಾಖೆಯಿಂದ ರಸ್ತೆ ಬದಿಯಲ್ಲಿ ಬೆಳೆಸುತ್ತಿರುವ ಗಿಡಗಳಿಗೆ ಕಟ್ಟಿ ನೀರು ತುಂಬುತ್ತಾ ಸಾಗಿರುವದು ಹೊಸ ಸಂಚಲನವನ್ನು ಸೃಷ್ಠಿ ಮಾಡಿದೆ.

ಅತ್ಯಂತ ವಿದ್ಯಾವಂತರು, ಬುದ್ದಿವಂತರೂ ಆಗಿರುವ ನಾವುಗಳೇ ಹೊರಗಡೆ ಬಂದಾಗ ನೀರು ಕುಡಿಯಲು ಬಿಸ್ಲೇರಿ ಬಾಟಲಿಗಳನ್ನು ಖರೀದಿಸುವದು ಸಾಮಾನ್ಯ ಆದರೆ ಆ ಪ್ಲಾಸ್ಟಿಕ್ ಬಾಟಲಿ ಪರಿಸರಕ್ಕೆ ಹಾನಿಕರ ಎಂಬುದು ಗೊತ್ತಿದ್ದರೂ ಕೂಡಾ ಅದರಲ್ಲಿಯ ನೀರು ಆದ ತಕ್ಷಣವೇ ರಸ್ತೆಬದಿಗೋ ಎಲ್ಲಿಯೋ ಬಿಸಾಕಿ ಕೈಬಿಸುತ್ತಾ ಮನೆಗೆ ಬಂದು ಸೇರುತ್ತಾರೆ.

ಇಂತಹ ನಿರೂಪಯುಕ್ತ ನೀರಿನ ಪ್ಲಾಸ್ಟಿಕ್ ಬಾಟಲಿಗಳು ವರ್ಷಪೂರ್ತಿ ಇತರೆ ಜೀವರಾಶಿಗಳ ಯುಪಯೋಗಕ್ಕೆ ಬಳೆಸುವಂತಹ ಹೊಸ ಆಲೋಚನೆಗಳನ್ನು ಮಾಡುವದು ಬಹಳೇ ಕಡಿಮೆ ಅಂತಹ ಎಲ್ಲೋ ಬಿದ್ದ ಬಾಟಲಿಗಳನ್ನು ಸಂಗ್ರಹಿಸಿ ಅವುಗಳನ್ನು ಪಕ್ಷಿ ಸಂಕುಲಗಳ ಜೀವರಾಶಿಗಳಿಗಾಗಿ ಉಪಯೋಗಿಸುವದರ ಜೊತೆಗೆ ಮಾದರಿ ಕಾರ್ಯಕ್ಕೆ ಸಂಘಟಿತ ಯುವ ಸಮೂಹ ಮುಂದಾಗಿರುವದು ಜನರ ಮೆಚ್ಚುಗೆಗೆ ಪಾತ್ರವಾಗಿದೆ.

ಸಿದ್ದಲಿಂಗಶ್ರೀಗಳ ಪ್ರೇರಣೆಯ ಫಲವಾಗಿ ಮೂರು ಹೊತ್ತು ನೀರು ಕುಡಿಯಲು ನೂರಾರು ಪಕ್ಷಿಗಳು ಬರುತ್ತಿವೆ ಚಿಟುಗು ಗುಬ್ಬಿ, ನೀಲಿ ಬಣ್ಣದ ಹಕ್ಕಿ, ಮರಕುಟುಕ, ಚುಂವ್ ಚುಂವ್ ಕುಟುಕುವ ಗುಬ್ಬಚ್ಚಿ, ಕಾಗೆ, ಗಿಳಿ, ಸಾಂಬಾರು ಕಾಗೆ, ಕೋಗಿಲೆ ಹೀಗೆ ಅನೇಕ ಬಣ್ಣದ ಪಕ್ಷಿಗಳು ನೀರು ಕುಡಿಯಲು ಬರುತ್ತಿವೆ ಅಲ್ಲದೇ ಮಧ್ಯಾಹ್ನದ ಬಿಸಿಲಿನ ಸಮಯದಲ್ಲಿ ದಣಿವಾರಿಸಿಕೊಳ್ಳಲು ಸೂಕ್ತ ಸ್ಥಳವನ್ನಾಗಿಸಿಕೊಳ್ಳುತ್ತಿವೆ.


ನಿರುಪಯುಕ್ತವಾದ ಬಾಟಲಿಗಳನ್ನು ಬಳೆಸಿ ಜೀವಸಂಕುಲಗಳಲ್ಲೊಂದಾದ ಪಕ್ಷಿ ಸಂಕುಲಗಳನ್ನು ಉಳಿಸಿ ಬೆಳೆಸಲು ನಿರುಪಯುಕ್ತವಸ್ತುಗಳನ್ನು ಬಳಿಸಿ ಯುಪಯುಕ್ತವಾಗುವ ಹೊಸ ಹೆಜ್ಜೆ ಇಟ್ಟಿರುವ ಗಡಿಸೋಮನಾಳ ಗ್ರಾಮದ ಶ್ರೀ ಬಸವ ಚೇತನ ಗ್ರಾಮೀಣಾಭಿವೃದ್ಧಿ ಸಂಘದ ಯುವ ಸಮೂಹದ ಮಾದರಿಯ ಕಾರ್ಯವು ಜನಮೆಚ್ಚುಗೆಗೆ ಪಾತ್ರವಾಗಿದೆ ಅಲ್ಲದೇ ಚಿಕ್ಕವರಿಂದ ದೊಡ್ಡವರ ವರೆಗೆ ಪ್ರೇರಣೆಯಾಗುತ್ತಿರುವದು ಎಲ್ಲರ ಸಂತಸಕ್ಕೆ ಕಾರಣವಾಗಿದೆ. ಬೆಳಿಗಿನ ಸಮಯ ವಾಯು ವಿಹಾರದ ಸಮಯದಲ್ಲಿ ನಿತ್ಯ ಈ ಅರವಟಿಗೆಗಳಿಗೆ ನೀರು ತುಂಬಿ ನಂತರ ತಮ್ಮ ಕೆಲಸ ಕಾರ್ಯಗಳಲ್ಲಿ ತೊಡಗಿಕೊಳ್ಳುತ್ತಿದ್ದಾರೆ.

ಈ ಮಾದರಿಯ ಕಾರ್ಯದಲ್ಲಿ ಶ್ರೀ ಬಸವ ಚೇತನ ಗ್ರಾಮೀಣಾಭಿವೃದ್ಧಿ ಸಂಘದ ಅಧ್ಯಕ್ಷರಾದ ಸಂಗಮೇಶ್ ಎಸ್ ಹರವಾಳ, ಕಾರ್ಯದರ್ಶಿ ಗುರುರಾಜ್ ಕಾಜಗಾರ, ಹಾಗೂ ಸಂಘದ ಪದಾಧಿಕಾರಿಗಳಾದ ಗೌಡಪ್ಪಗೌಡ ಬಿರಾದಾರ, ಮುತ್ತು ವಡವಡಗಿ, ಕುಮಾರ ಹರವಾಳ, ವಿಜಯಕುಮಾರ್ ಸಾಸನೂರ, ರಮೇಶ್ ಹರವಾಳ ಮೊದಲಾದವರು ಒಳಗೊಂಡಿದ್ದಾರೆ.

ಪರಿಸರ ಉಳಿಸಿ ಬೆಳೆಸಬೇಕಾದ ವಿದ್ಯಾವಂತರಿಂದಲೇ ನಿರುಪಯುಕ್ತವಾದ ಬಿಸ್ಲೇರಿ ಬಾಟಲಿಗಳನ್ನು ಬಳಸಿ ಪಕ್ಷಿ ಸಂಕುಲಗಳಿಗೆ ಆಶ್ರಯದ ಜೊತೆಗೆ ಆಯಾಸ ತಣಿಸಲು ಗಡಿಸೋಮನಾಳ ಗ್ರಾಮದ ಯುವಕರ ತಂಡ 1 ಸಾವಿರ ಗಿಡಮರಗಳಿಗೆ ಅರವಟಿಗಳನ್ನು ನಿರ್ಮಿಸಿ ಕಟ್ಟುವದರ ಜೊತೆಗೆ ನೀರು ತುಂಬಿಸುವ ಕಾರ್ಯಕ್ಕೆ ಮುಂದಾಗಿರುವದು ಶ್ಲಾಘನೀಯವಾಗಿದೆ ಶ್ರೀ ಖಾಸ್ಗತಜ್ಜನ, ವಿರಕ್ತಜ್ಜನ ಆಶಿರ್ವಾದ ಸದಾ ಯುವ ಸಮೂಹದ ಮೇಲೆ ಇರಲಿದೆ.

ಬಾಲಶಿವಯೋಗಿ ಸಿದ್ದಲಿಂಗಶ್ರೀ
ಶ್ರೀ ಖಾಸ್ಗತೇಶ್ವರ ಮಠ ತಾಳಿಕೋಟೆ

## ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿದರೆ ನಿರ್ದಾಕ್ಷಿಣ್ಯ ಕ್ರಮ: ಜಿಲ್ಲಾಧಿಕಾರಿ ಡಾ. ಆನಂದ ಕೆ. ಎಚ್ಚರಿಕೆ



**ವಿಜಯಪುರ, ಏ. 17:** ರಸಗೊಬ್ಬರ ಮಾರಾಟ ಸಂಬಂಧಿಸಿದಂತೆ ನಿಗದಿತ ದರಕ್ಕಿಂತ ಹೆಚ್ಚಿನ ದರ ವಸೂಲಿ, ಅಕ್ರಮ ದಾಸ್ತಾನು ಹಾಗೂ ಕೃತಕ ಅಭಾವ ಸೃಷ್ಟಿಸಿದರೆ ಸಂಬಂಧಪಟ್ಟವರ ವಿರುದ್ಧ ನಿಯಮಾನುಸಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಎಚ್ಚರಿಕೆ ನೀಡಿದರು.

ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ರಸಗೊಬ್ಬರ ಉತ್ಪಾದಕರು ಹಾಗೂ ಮಾರಾಟಗಾರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲ ರಸಗೊಬ್ಬರಗಳನ್ನು ಪಿಓಎಸ್ (ಪಾಯಿಂಟ್ ಆಫ್ ಸೇಲ್) ಯಂತ್ರದ ಮೂಲಕವೇ ಕಡ್ಡಾಯವಾಗಿ ಮಾರಾಟ ಮಾಡಿ ದಾಖಲಿಸಬೇಕು ಎಂದರು.

ಯೂರಿಯಾ ರಸಗೊಬ್ಬರ ಮಾರಾಟ ಮಾಡುವಾಗ ಕೃಷಿ ಇಲಾಖೆಯ ಕೆ-ಕಿಸಾನ್ ತಂತ್ರಾಂಶದ ಮೂಲಕ ಫ್ರುಟ್ಸ್ ಐಡಿ ಆಧಾರಿತ ಜಮೀನಿನ ವಿಸ್ತೀರ್ಣದ ಪ್ರಕಾರ, ಒಂದು ಎಕರೆಗೆ ಒಂದು ಚೀಲದಂತೆ ಮಾರಾಟ ಮಾಡಬೇಕು ಎಂದರು.

ರಸಗೊಬ್ಬರ ಮಳಿಗೆಗಳಲ್ಲಿ ಪಿಓಎಸ್ ದಾಖಲಾತಿ ಮತ್ತು ಭೌತಿಕ ದಾಸ್ತಾನು ಹೊಂದಾಣಿಕೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದರು.

ರಸಗೊಬ್ಬರ ಮಾರಾಟಗಾರರು ತಮ್ಮ ಮಳಿಗೆಯ ಮುಂದೆ ಅಂದಿನ ರಸಗೊಬ್ಬರ ದರ ಹಾಗೂ ದಾಸ್ತಾನು ವಿವರಗಳನ್ನು ಸ್ಪಷ್ಟವಾಗಿ ಕಾಣುವಂತೆ ಫಲಕ ಪ್ರದರ್ಶಿಸುವುದು ಕಡ್ಡಾಯವಾಗಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ ಮಾತನಾಡಿ, ಮುಂಬರುವ ಮುಂಗಾರು ಹಂಗಾಮಿಗೆ ಜಿಲ್ಲೆಗೆ ಏಪ್ರಿಲ್ 2026 ರಿಂದ ಸೆಪ್ಟೆಂಬರ್ 2026 ರವರೆಗೆ ಒಟ್ಟು 1.27 ಲಕ್ಷ ಮೆಟ್ರಿಕ್ ಟನ್ ವಿವಿಧ ರಸಗೊಬ್ಬರಗಳ ಬೇಡಿಕೆ ಇದ್ದು, ಏ. 15ರ ಸ್ಥಿತಿಗೆ ಜಿಲ್ಲೆಯಲ್ಲಿ ಒಟ್ಟು 64,337 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದ್ದು, ಅದರಲ್ಲಿ ಮುಖ್ಯವಾಗಿ 16,442 ಮೆಟ್ರಿಕ್ ಟನ್ ಯೂರಿಯಾ, 9,871 ಮೆಟ್ರಿಕ್ ಟನ್ ಡಿ.ಎ.ಪಿ ಹಾಗೂ 32,466 ಮೆಟ್ರಿಕ್ ಟನ್ ಕಾಂಪ್ಲೆಕ್ಸ್ ರಸಗೊಬ್ಬರಗಳ ದಾಸ್ತಾನು ಇದೆ. ಮಾಹೆವಾರು ಸರಬರಾಜು ಯೋಜನೆಯಂತೆ ಜಿಲ್ಲೆಗೆ ರಸಗೊಬ್ಬರ ಪೂರೈಕೆ ಆಗುತ್ತಿದ್ದು, ಸಮರ್ಪಕ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ರಸಗೊಬ್ಬರ ಮಾರಾಟಗಾರರಿಗೆ ಸೂಚಿಸಿದರು.

ಜಿಲ್ಲೆಯು ಅಂತಾರಾಜ್ಯ ಗಡಿಭಾಗದಲ್ಲಿರುವುದರಿಂದ ಗಡಿಭಾಗಗಳಲ್ಲಿ ಚೆಕ್ ಪೊ?ಸ್ಟ್ ಗಳ ಮೂಲಕ ಯೂರಿಯಾ ಅನಧಿಕೃತ ಸಾಗಾಣಿಕೆಗೆ ನಿಗಾ ವಹಿಸಲಾಗುತ್ತಿದೆ. ಪ್ರತಿವಾರ ವಿಡಿಯೋ ಕಾನ್ಸರೆನ್ಸ್ ಸಭೆಗಳ ಮೂಲಕ ರಸಗೊಬ್ಬರ ಪೂರೈಕೆ, ಮಾರಾಟ ಹಾಗೂ ದಾಸ್ತಾನು ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದರು.ಯೂರಿಯಾ ಹಾಗೂ ಡಿ.ಎ.ಪಿ ರಸಗೊಬ್ಬರಗಳಿಗೆ ಪರ್ಯಾಯವಾಗಿ ನ್ಯಾನೋ ಯೂರಿಯಾ ಮತ್ತು ನ್ಯಾನೋ ಡಿ.ಎ.ಪಿ ಬಳಕೆಗೆ ಉತ್ತೇಜನ ನೀಡುವಂತೆ ಮಾರಾಟಗಾರರಿಗೆ ಸೂಚನೆ ನೀಡಲಾಗಿದೆ ಎಂದರು.

ಏಪ್ರಿಲ್ 2026 ರಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಮತ್ತು ಡಿ.ಎ.ಪಿ ಮಾರಾಟ ಮಾಡಿದ ಕೆಲ ರಸಗೊಬ್ಬರ ಮಾರಾಟಗಾರರಿಗೆ ಈಗಾಗಲೇ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ಜಂಟಿ ನಿರ್ದೇಶಕರು ಸಭೆಗೆ ವಿವರಿಸಿದರು.

ಸಭೆಯಲ್ಲಿ ರಸಗೊಬ್ಬರ ಉತ್ಪಾದಕ ಕಂಪನಿಗಳ ಪ್ರತಿನಿಧಿಗಳು, ಸಗಟು ಹಾಗೂ ಚಿಲ್ಲರೆ ರಸಗೊಬ್ಬರ ಮಾರಾಟಗಾರರು, ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಹಾಗೂ ವಿಭಾಗೀಯ ಉಪ ಕೃಷಿ ನಿರ್ದೇಶಕರು ಪಾಲ್ಗೊಂಡಿದ್ದರು.

# ಎಂಟು ಜಿಲ್ಲೆಗಳಿಗೆ ಬಿಸಿಗಾಳಿ ಎಚ್ಚರಿಕೆ



**ಬೆಂಗಳೂರು, ಏ. 17–** ರಾಜ್ಯದಲ್ಲಿ ದಿನದಿಂದ ದಿನಕ್ಕೆ ಬಿಸಿಲಿನ ತೀವ್ರತೆ ಏರಿಕೆಯಾಗುತ್ತಿದ್ದು, ಅನೇಕ ಜಿಲ್ಲೆಗಳಿಗೆ ಹೀಟ್‌ವೇವ್ ಎಚ್ಚರಿಕೆ ನೀಡಲಾಗಿದೆ. ಉಷ್ಣಾಂಶವು ಸಾಮಾನ್ಯಕ್ಕಿಂತ 2–3 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿರುವ ಹಿನ್ನೆಲೆ ಜನಜೀವನದ ಮೇಲೆ ಪರಿಣಾಮ ಕಾಣಿಸುತ್ತಿದೆ.

ಹವಾಮಾನ ಇಲಾಖೆಯ ಪ್ರಕಾರ ಬೀದರ್, ಕಲಬುರ್ಗಿ, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನದಿಂದ ನಾಲ್ಕು ದಿನಗಳ ಕಾಲ ಉಷ್ಣ ಅಲೆ (ಹೀಟ್‌ವೇವ್) ಸಂಭವಿಸುವ ಸಾಧ್ಯತೆ ಇದೆ. ಜನರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

ಇನ್ನೂ ಬೆಂಗಳೂರಿನಲ್ಲಿಯೂ ಬಿಸಿಲಿನ ತೀವ್ರತೆ ಏರಿಕೆಯಾಗಿದ್ದು, ಈಗಾಗಲೇ ಗರಿಷ್ಠ ಉಷ್ಣಾಂಶ 35–36 ಡಿಗ್ರಿ ಸೆಲ್ಸಿಯಸ್ ದಾಖಲಾಗುತ್ತಿದೆ. ಈ ವಾರಾಂತ್ಯಕ್ಕೆ 39 ಡಿಗ್ರಿವರೆಗೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ನಿರ್ದೇಶಕರು ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ.

ಬಿಸಿಲಿನ ತಾಪದಿಂದ ಜನರು ಹೊರಗೆ ಹೋಗುವುದಕ್ಕೂ ಹೆದರುವ ಸ್ಥಿತಿ ನಿರ್ಮಾಣವಾಗಿದ್ದರೂ, ಕೆಲಸದ ನಿಮಿತ್ತ ಹೊರಡಲೇಬೇಕಾದ ಅನಿವಾರ್ಯತೆ ಇದೆ. ಈ ಹಿನ್ನೆಲೆ ಸಾರ್ವಜನಿಕರು ಸಾಮಾನ್ಯ ಬಸ್‌ಗಳ ಬದಲು ಎಸಿ ಸೌಲಭ್ಯ ಹೊಂದಿರುವ ವೋಲ್ವೋ ಬಸ್‌ಗಳನ್ನು ಹೆಚ್ಚು ಆಯ್ಕೆ ಮಾಡುತ್ತಿದ್ದಾರೆ.

ಕಳೆದ ಒಂದು ತಿಂಗಳಲ್ಲಿ ವೋಲ್ವೋ ಬಸ್ ಪ್ರಯಾಣಿಕರ ಸಂಖ್ಯೆಯಲ್ಲಿ ಶೇ.5ರಿಂದ 10ರಷ್ಟು ಏರಿಕೆ ಕಂಡುಬಂದಿದೆ. ಹೆಚ್ಚುವರಿ ಶುಲ್ಕ ಇದ್ದರೂ, ತಂಪಾದ ವಾತಾವರಣದಲ್ಲಿ ಆರಾಮದಾಯಕ ಪ್ರಯಾಣಕ್ಕಾಗಿ ಜನರು ವೋಲ್ವೋ ಬಸ್‌ಗಳತ್ತ ಮುಖ ಮಾಡುತ್ತಿದ್ದಾರೆ.ಬಿಸಿಲಿನ ಅಬ್ಬರ ನಡುವೆ ಜನರು ತಮ್ಮ ದಿನನಿತ್ಯದ ಸಂಚಾರಕ್ಕೂ ಪರ್ಯಾಯ ಮಾರ್ಗಗಳನ್ನು ಹುಡುಕುತ್ತಿದ್ದು, ಎಸಿ ಬಸ್‌ಗಳ ಬಳಕೆ ಹೆಚ್ಚುತ್ತಿರುವುದು ಗಮನಾರ್ಹವಾಗಿದೆ..

# ಕಾಳಸಂತೆಯಲ್ಲಿ ಐಪಿಎಲ್ ಟಿಕೆಟ್ ಮಾರಾಟ ಜಾಲ ಪತ್ತೆ



**ಬೆಂಗಳೂರು,ಏ.17–** ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಟಿಕೆಟ್‌ಗಳನ್ನು ಹೆಚ್ಚಿನ ಬೆಲೆಗೆ ಬ್ಲಾಕ್‌ನಲ್ಲಿ ಮಾರಾಟ ಮಾಡುತ್ತಿದ್ದ ಜಾಲವನ್ನು ಸಿಸಿಬಿ ಪೊಲೀಸರು ಭೇದಿಸಿದ್ದಾರೆ. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ (ಕೆಎಸ್ ಸಿಎ) ಸದಸ್ಯನೊಬ್ಬ ಜಾಲದಲ್ಲಿ ಸಕ್ರಿಯವಾಗಿರುವುದು ಬೆಳಕಿಗೆ ಬಂದಿದ್ದು, ಪೊಲೀಸರು ಇಬ್ಬರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಕೆಎಸ್‌ಸಿಎ ಸದ್ಯ ಚಿನ್ನಸ್ವಾಮಿ ಸ್ಟೇಡಿಯಂ ಕ್ಯಾಂಟೀನ್ ಕೆಲಸಗಾರ ಜೊತೆ ಸೇರಿ ಕೃತ್ಯ ಎಸಗುತ್ತಿದ್ದ ಎಂಬುದು ಸಿಸಿಬಿ ವಿಚಾರಣೆ ವೇಳೆ ಬಯಲಾಗಿದೆ.

ಸಿಸಿಬಿ ಡಿಸಿಪಿ ಹರಿಬಾಬು ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಲಕ್ಷ್ಮೀ ಕ್ಯಾಟರ್ಸ್ ಹೋಟೆಲ್‌ನ ಕ್ಯಾಪ್ಟನ್ ಚಂದ್ರಶೇಖರ್ ಸಿಕ್ಕಿಬಿದ್ದಿದ್ದಾನೆ. 15 ಸಾವಿರ ರೂ ಬೆಲೆಯ ಟಿಕೆಟ್‌ಗಳನ್ನು ಈತ ಬರೋಬ್ಬರಿ 19 ಸಾವಿರ ರೂಗೆ ಮಾರಾಟ ಮಾಡುತ್ತಿದ್ದಾಗ ಪೊಲೀಸರು ದಾಳಿ ನಡೆಸಿ ಸೆರೆಹಿಡಿದಿದ್ದಾರೆ. ವಿಚಾರಣೆ ವೇಳೆ ಈತ ನೀಡಿದ ಮಾಹಿತಿ ಆಘಾತಕಾರಿಯಾಗಿದ್ದು, ಕೆಎಸ್‌ಸಿಎ ಸದಸ್ಯ ಗಣೇಶ್ ಹರಿಕೇಶ್ ಎಂಬುವವರ ಹೆಸರನ್ನು ಬಾಯ್ಬಿಟ್ಟಿದ್ದಾನೆ.


ಆರೋಪಿ ಗಣೇಶ್ ಹರಿಕೇಶ್, ಎರಡು ಖಾಸಗಿ ಕಂಪನಿಗಳ ಹೆಸರಿನಲ್ಲಿ ಆನ್‌ಲೈನ್ ಮೂಲಕ ದೊಡ್ಡ ಪ್ರಮಾಣದಲ್ಲಿ ಟಿಕೆಟ್‌ಗಳನ್ನು ಖರೀದಿಸಿದರೆ, ಚಂದ್ರಶೇಖರ್ ಮೂಲಕ ಅವುಗಳನ್ನು ಬ್ಲಾಕ್‌ನಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗುತ್ತಿತ್ತು. ಆರ್‌ಸಿಬಿಯ ಮೊದಲ ಪಂದ್ಯದಲ್ಲಿ ಇವರು 81 ಟಿಕೆಟ್‌ಗಳನ್ನು ಮಾರಾಟ ಮಾಡಿದ್ದರು. ಕಳೆದ ಪಂದ್ಯಕ್ಕೆ 100 ಟಿಕೆಟ್‌ಗಳನ್ನು ಸಿದ್ಧಪಡಿಸಿಕೊಂಡಿದ್ದರು.

17 ಲಕ್ಷ ರೂ ಅಧಿಕ ಮೌಲ್ಯದ 181 ಟಿಕೆಟ್‌ಗಳನ್ನು ಖರೀದಿಸಿದ್ದು, ಅವುಗಳ ಪೈಕಿ 100 ಟಿಕೆಟ್‌ಗಳನ್ನು ಬ್ಲಾಕ್‌ನಲ್ಲಿ ಮಾರಾಟ ಮಾಡಿರುವುದು ಪತ್ತೆಯಾಗಿದೆ.ಚಂದ್ರಶೇಖರ್ ಬಂಧನವಾಗುತ್ತಿದ್ದಂತೆ ಗಣೇಶ್ ಹರಿಕೇಶ್ ನಾಪತ್ತೆಯಾಗಿದ್ದು, ಪೊಲೀಸರು ಶೋಧ ನಡೆಸುತ್ತಿದ್ದಾರೆ. ಟಿಕೆಟ್ ಪೂರೈಸಿದ ಜೀನಿ ಸೇರಿದಂತೆ ಎರಡು ಖಾಸಗಿ ಸಂಸ್ಥೆಗಳಿಗೂ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಲು ಸಿದ್ಧತೆ ನಡೆಸಲಾಗಿದೆ.

# ಕೆಂಪೇಗೌಡ ಬಸ್ ನಿಲ್ದಾಣದ ಟರ್ಮಿನಲ್ –1 ರಲ್ಲಿನ ಪಾರ್ಕಿಂಗ್ ಸಮಸ್ಯೆಗೆ ಪರಿಹಾರ

**ಬೆಂಗಳೂರು, ಏ. 17–**ಕೆಂಪೇಗೌಡ ಬಸ್ ನಿಲ್ದಾಣದ ಟರ್ಮಿನಲ್–01 ರಲ್ಲಿ ಪುನರ್ ಅಭಿವೃದ್ಧಿಪಡಿಸಿರುವ ಪಾರ್ಕಿಂಗ್ ಪ್ರದೇಶಕ್ಕೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಇಂದು ಚಾಲನೆ ನೀಡಿದರು.

ವಾಹನಗಳ ಸುಗಮ ಸಂಚಾರ, ಸಿಬ್ಬಂದಿಗಳು ಹಾಗೂ ಪ್ರಯಾಣಿಕರ ಅನುಕೂಲಕ್ಕಾಗಿ ಉತ್ತಮವಾದ ಪಾರ್ಕಿಂಗ್ ಜಾಗವನ್ನು ರೂ.03.29 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗಿದೆ.



ಬಸ್ ನಿಲ್ದಾಣದಲ್ಲಿನ ಟರ್ಮಿನಲ್–01 ರ ಬಳಿಯಿರುವ (ವಿಶ್ರಾಂತಿ ಗೃಹ) ಕ್ಕೆ ಹೊಂದಿ ಕೊಂಡಂತೆ ಇರುವ ಸ್ಥಳವು ಗುಂಡಿಗಳಿಂದ ತುಂಬಿ, ಮಳೆ ಬಂದ ಸಂದರ್ಭದಲ್ಲಿ ಮಳೆಯ ನೀರು ಸಹ ತುಂಬಿಕೊಂಡು ಸಾರ್ವಜನಿಕ ಪ್ರಯಾಣಿಕರಿಗೆ ಹಾಗೂ ಸದರಿ ಸ್ಥಳದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ತುಂಬಾ ತೊಂದರೆಯುಂಟಾಗುತ್ತಿತ್ತು.

ಈ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನಕ್ಕೆ ಬಂದ ಕೂಡಲೇ ಭೇಟಿ ನೀಡಿ ತುರ್ತಾಗಿ ಪಾರ್ಕಿಂಗ್ ಆವರಣವನ್ನು ಅಭಿವೃದ್ಧಿಪಡಿಸಬೇಕೆಂದು ಆದೇಶ ನೀಡಿದ್ದರು.ಎರಡೂವರೆ ಎಕರೆ ಪ್ರದೇಶವನ್ನು ವಾಹನ ನಿಲುಗಡೆಗೆ ಸೂಕ್ತವಾಗಿ ಅಭಿವೃದ್ಧಿಪಡಿಸಲು ಟೆಂಡರ್ ಕರೆದು, ಕಾಮಗಾರಿ ಕೆಲಸ ಪೂರ್ಣಗೊಳಿಸಲಾಗಿದೆ.

ಈ ಜಾಗದಲ್ಲಿ ಅಂದಾಜು 100 ಬಸ್ ಗಳ ನಿಲುಗಡೆಗೆ ವ್ಯವಸ್ಥೆ ಮಾಡಬಹುದಾಗಿದೆ.

ಪಾರ್ಕಿಂಗ್ ಸ್ಥಳದಲ್ಲಿ 11 ಸಂಖ್ಯೆಯ ವಿದ್ಯುತ್ ದೀಪದ ಕಂಬಗಳು. ವಿದ್ಯುತ್ ಪ್ಯಾನಲ್ ಕೊಠಡಿಯನ್ನು ಕೂಡ ನಿರ್ಮಾಣ ಮಾಡಲಾಗಿದೆ.ವಾಯುವ್ಯ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಗಳಿಗೆ ನಿಲುಗಡೆಗೆ ಸ್ಥಳಾವಕಾಶ ಕಲ್ಪಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಶ್ರೀ.ಅಕ್ರಂ ಪಾಷ ಭಾಆಸೇ, ವ್ಯವಸ್ಥಾಪಕ ನಿರ್ದೇಶಕರು, ಕರಾರಸಾ ನಿಗಮ ಹಾಗೂ ನಿಗಮದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಗೌತಮ್ ಅದಾನಿ ಏಷ್ಯಾದ ಅತ್ಯಂತ ಶ್ರೀಮಂತ ವ್ಯಕ್ತಿ

**ನವದೆಹಲಿ, ಏ.17:–** ಬ್ಲೂಮ್‌ಬರ್ಗ್ ಬಿಲಿಯನೇರ್‌ಗಳ ಪಟ್ಟಿಯ ಪ್ರಕಾರ, ಅದಾನಿ ಗ್ರೂಪ್‌ನ ಅಧ್ಯಕ್ಷ ಮತ್ತು ಬಿಲಿಯನೇರ್ ಕೈಗಾರಿಕೋದ್ಯಮಿ ಗೌತಮ್ ಅದಾನಿ ಇತ್ತೀಚೆಗೆ ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಖೇಶ್ ಅಂಬಾನಿ ಅವರನ್ನು ಹಿಂದಿಕ್ಕಿ ಏಷ್ಯಾದ ಅತ್ಯಂತ ಶ್ರೀಮಂತ ವ್ಯಕ್ತಿಯಾಗಿದ್ದಾರೆ.ಗೌತಮ್ ಅದಾನಿಯವರ ನಿವ್ವಳ ಮೌಲ್ಯ $126.6 ಬಿಲಿಯನ್ ತಲುಪಿದ್ದು, ಜಾಗತಿಕವಾಗಿ ಅವರಿಗೆ 19 ನೇ ಸ್ಥಾನ ಸಿಕ್ಕಿದೆ, ಆದರೆ ಮುಖೇಶ್ ಅಂಬಾನಿ $125.8 ಬಿಲಿಯನ್ ನಿವ್ವಳ ಮೌಲ್ಯದೊಂದಿಗೆ 20 ನೇ ಸ್ಥಾನಕ್ಕೆ ಕುಸಿದಿದ್ದಾರೆ.

ಈ ಬದಲಾವಣೆಯು ಜಾಗತಿಕ ಸಂಪತ್ತಿನ ಶ್ರೇಯಾಂಕಗಳಲ್ಲಿ ನಡೆಯುತ್ತಿರುವ ಏರಿಳಿತಗಳನ್ನು ಪ್ರತಿಬಿಂಬಿಸುತ್ತದೆ, ಇದು 2026 ರಲ್ಲಿ ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತು ಮಾರುಕಟ್ಟೆಯ ಏರಿಳಿತಗಳ ನಡುವೆ ನಡೆಯುತ್ತಿದೆ.

ಗುರುವಾರ ಷೇರು ಮಾರುಕಟ್ಟೆಯಲ್ಲಿ ಅದಾನಿ ಗ್ರೂಪ್ ಷೇರುಗಳು ತೀವ್ರ ಏರಿಕೆ ಕಂಡಿದ್ದು, ಗೌತಮ್ ಅದಾನಿ ಅವರ ಸಂಪತ್ತು ಒಂದೇ ದಿನದಲ್ಲಿ ಸುಮಾರು $1.56 ಬಿಲಿಯನ್ ಹೆಚ್ಚಾಗಿದೆ.ಜಾಗತಿಕವಾಗಿ, ಟೆಸ್ಲಾ ಸಿಇಒ ಎಲಾನ್ ಮಸ್ಕ್ 246.6 ಬಿಲಿಯನ್ ಡಾಲರ್ ನಿವ್ವಳ ಮೌಲ್ಯದೊಂದಿಗೆ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದರೆ, ಗೂಗಲ್ ಸಹ–ಸಂಸ್ಥಾಪಕ ಲ್ಯಾರಿ ಪೇಜ್ 126.6 ಬಿಲಿಯನ್ ಡಾಲರ್‌ನೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ.ಟಾಪ್ 10 ರಲ್ಲಿರುವ ಇತರ ಹೆಸರುಗಳಲ್ಲಿ ಅಮೆಜಾನ್‌ನ ಜೆಫ್ ಬೆಜೋಸ್, ಮೆಟಾದ ಮಾರ್ಕ್ ಜುಕರ್‌ಬರ್ಗ್, ಒರಾಕಲ್‌ನ ಲ್ಯಾರಿ ಎಲಿಸನ್, ಡೆಲ್ ಟೆಕ್ನಾಲಜೀಸ್‌ನ ಮೈಕೆಲ್ ಡೆಲ್, ಎನ್ವಿಡಿಯಾದ ಜೆನ್ಸನ್ ಹುವಾಂಗ್ ಮತ್ತು ಎಲ್‌ವಿಎಂಎಚ್ ಸಿಇಒ ಬರ್ನಾರ್ಡ್ ಅರ್ನಾಲ್ಟ್ ಸೇರಿದ್ದಾರೆ.ವಿಶ್ವದ ಅಗ್ರ 20 ಶ್ರೀಮಂತ ವ್ಯಕ್ತಿಗಳಲ್ಲಿ ಏಳು ಜನರ ಸಂಪತ್ತು 2026 ರಲ್ಲಿ ಇಲ್ಲಿಯವರೆಗೆ ಕುಸಿದಿದೆ.ಅರ್ನಾಲ್ಟ್ ಅತಿದೊಡ್ಡ ಕುಸಿತ ಕಂಡಿದ್ದು, ಈ ಅವಧಿಯಲ್ಲಿ ಅವರ ಸಂಪತ್ತು $20.5 ಬಿಲಿಯನ್‌ಗಳಷ್ಟು ಕುಸಿದಿದೆ.ಸಂಪತ್ತಿನಲ್ಲಿ ಗಮನಾರ್ಹ ಇಳಿಕೆ ಕಂಡ ಇತರ ಶತಕೋಟ್ಯಾಧಿಪತಿಗಳಲ್ಲಿ ಸ್ಟೀವ್ ಬಾಲ್ಮರ್, ಲ್ಯಾರಿ ಎಲಿಸನ್, ಬಿಲ್ ಗೇಟ್ಸ್, ವಾರೆನ್ ಬಫೆಟ್ ಮತ್ತು ಅಮಾನ್ಸಿಯೊ ಒರ್ಟೆಗಾ ಸೇರಿದ್ದಾರೆ. ಇತರ ಭಾರತೀಯ ಶತಕೋಟ್ಯಾಧಿಪತಿಗಳಲ್ಲಿ, ಲಕ್ಷ್ಮಿ ಮಿತ್ತಲ್ $30.9 ಬಿಲಿಯನ್ ನಿವ್ವಳ ಮೌಲ್ಯದೊಂದಿಗೆ ಜಾಗತಿಕವಾಗಿ 62 ನೇ ಸ್ಥಾನದಲ್ಲಿದ್ದಾರೆ.

ಎಚ್‌ಸಿಎಲ್ ಸಂಸ್ಥಾಪಕ ಶಿವ ನಾಡರ್ 25.5 ಬಿಲಿಯನ್ ಡಾಲರ್ ನಿವ್ವಳ ಮೌಲ್ಯದೊಂದಿಗೆ 70 ನೇ ಸ್ಥಾನದಲ್ಲಿದ್ದರೆ, ಶಾಪೂರ್ ಮಿಸ್ತ್ರಿ ಮತ್ತು ಕುಟುಂಬ 25.2 ಬಿಲಿಯನ್ ಡಾಲರ್ ನಿವ್ವಳ ಮೌಲ್ಯದೊಂದಿಗೆ 71 ನೇ ಸ್ಥಾನದಲ್ಲಿದೆ.

ಪಟ್ಟಿಯಲ್ಲಿರುವ ಇತರ ಪ್ರಮುಖ ಭಾರತೀಯ ಹೆಸರುಗಳೆಂದರೆ ಸುನಿಲ್ ಮಿತ್ತಲ್ ಮತ್ತು ಕುಟುಂಬ, ಅಜೀಂ ಪ್ರೇಮ್‌ಜಿ, ಕುಮಾರ್ ಮಂಗಲಂ ಬಿರ್ಲಾ ಮತ್ತು ರಾಧಾಕೃಷ್ಣ ದಮಾನಿ.ಓಪಿ ಜಿಂದಾಲ್ ಗ್ರೂಪ್‌ನ ನಿವೃತ್ತ ಅಧ್ಯಕ್ಷೆ ಸಾವಿತ್ರಿ ಜಿಂದಾಲ್, $23.7 ಬಿಲಿಯನ್ ನಿವ್ವಳ ಮೌಲ್ಯದೊಂದಿಗೆ ಜಾಗತಿಕವಾಗಿ 73 ನೇ ಸ್ಥಾನದಲ್ಲಿದ್ದಾರೆ.ಶುಕ್ರವಾರದ ವಹಿವಾಟಿನಲ್ಲಿ ಅದಾನಿ ಟೋಟಲ್ ಗ್ಯಾಸ್, ಅದಾನಿ ಪೋರ್ಟ್ಸ್ ಮತ್ತು ಅದಾನಿ ಪವರ್‌ನಂತಹ ಅದಾನಿ ಗ್ರೂಪ್ ಷೇರುಗಳು ಶೇಕಡಾ 3 ರಷ್ಟು ಏರಿಕೆಯಾಗಿವೆ.

ಪಟ್ಟಿಯ ಪ್ರಾದೇಶಿಕ ವಿಶ್ಲೇಷಣೆಯು ಜಾಗತಿಕ ಸಂಪತ್ತು ಪಟ್ಟಿಯಲ್ಲಿ ತಂತ್ರಜ್ಞಾನ ಉದ್ಯಮಿಗಳು ಪ್ರಾಬಲ್ಯ ಹೊಂದಿದ್ದಾರೆಂದು ತೋರಿಸುತ್ತದೆ, ಆದರೆ ಕೈಗಾರಿಕಾ, ಇಂಧನ ಮತ್ತು ಚಿಲ್ಲರೆ ವ್ಯಾಪಾರದ ಬಿಲಿಯನೇರ್‌ಗಳ ಸಂಪತ್ತು ತುಲನಾತ್ಮಕವಾಗಿ ಹೆಚ್ಚಿನ ಏರಿಳಿತವನ್ನು ಕಂಡಿದೆ.

# ಧೋನಿ ಹಿಂದಿಕ್ಕಿದ ಕ್ವಿಂಟನ್ ಡಿ ಕಾಕ್



**ಮುಂಬೈ,ಏ.17–**ಐಪಿಎಲ್ 2026 ರ 24 ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮುಂಬೈ ಇಂಡಿಯನ್ಸ್ ತಂಡವನ್ನು 7 ವಿಕೆಟ್‌ಗಳಿಂದ ಸೋಲಿಸಿದೆ. ವಾಂಖೆಡೆ ಕ್ರೀಡಾಂಗಣದಲ್ಲಿ ವಿಕೆಟ್ ಕೀಪರ್ ಆಗಿ ಅತಿ ಹೆಚ್ಚು 50+ ರನ್ ಗಳಿಸಿದ ವಿಷಯದಲ್ಲಿ ಕ್ವಿಂಟನ್ ಡಿ ಕಾಕ್ ಎಂಎಸ್ ಧೋನಿ ಅವರನ್ನು ಹಿಂದಿಕ್ಕಿದ್ದಾರೆ.

ಗುರುವಾರ ಮುಂಬೈ ಪರ ಡಿ ಕಾಕ್ ಅಜೇಯ 112 ರನ್ ಗಳಿಸುವ ಮೂಲಕ ಎರಡನೇ ಅತಿ ಹೆಚ್ಚು ವೈಯಕ್ತಿಕ ಸ್ಕೋರರ್ ಎನಿಸಿಕೊಂಡಿದ್ದಾರೆ.

ಕ್ವಿಂಟನ್ ಡಿ ಕಾಕ್ ಐಪಿಎಲ್‌ನಲ್ಲಿ ವಿಕೆಟ್‌ಕೀಪರ್ ಆಗಿ 25ನೇ 50+ ಸ್ಕೋರ್ ಪೂರ್ಣಗೊಳಿಸಿದರು. ಅವರು ಐವತ್ತು+ ರನ್‌ಗಳ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೆ ಏರಿದರು. ಕೆಎಲ್ ರಾಹುಲ್ (31) ವಿಕೆಟ್‌ಕೀಪರ್ ಆಗಿ ಅತಿ ಹೆಚ್ಚು 50+ ರನ್‌ಗಳನ್ನು ಗಳಿಸಿದ್ದಾರೆ, ನಂತರ ಎಂಎಸ್ ಧೋನಿ (24) ಮತ್ತು ದಿನೇಶ್ ಕಾರ್ತಿಕ್ (21) ಇದ್ದಾರೆ.

ಈ ಪಂದ್ಯದಲ್ಲಿ ಕ್ವಿಂಟನ್ ಡಿ ಕಾಕ್ ಅಜೇಯ 112 ರನ್ ಗಳಿಸಿದರು, ಇದು ಮುಂಬೈ ಇಂಡಿಯನ್ಸ್ ಪರ ಐಪಿಎಲ್‌ನಲ್ಲಿ ಎರಡನೇ ಅತ್ಯಧಿಕ ವೈಯಕ್ತಿಕ ಸ್ಕೋರ್ ಆಗಿದೆ. ಈ ಪಟ್ಟಿಯಲ್ಲಿ ಸನತ್ ಜಯಸೂರ್ಯ (114)* ಅಗ್ರಸ್ಥಾನದಲ್ಲಿದ್ದಾರೆ, ಅವರು 2008 ರಲ್ಲಿ ಈ ಇನ್ನಿಂಗ್ಸ್ ಮಾಡಿದರು. ಡಿ ಕಾಕ್ ರೋಹಿತ್ ಶರ್ಮಾ ಅವರನ್ನು ಹಿಂದಿಕ್ಕಿ ಎರಡನೇ ಸ್ಥಾನ ಪಡೆದಿದ್ದಾರೆ.

ಡಿ ಕಾಕ್ ಟಿ20 ಕ್ರಿಕೆಟ್‌ನಲ್ಲಿ ತಮ್ಮ ಒಂಬತ್ತನೇ ಶತಕ ಪೂರೈಸಿದರು. ಕ್ರಿಸ್ ಗೇಲ್ (22) ಅತಿ ಹೆಚ್ಚು ಶತಕಗಳ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದರೆ, ಬಾಬರ್ ಅಜಮ್ (11) ಮತ್ತು ಡೇವಿಡ್ ವಾರ್ನರ್ (10) ನಂತರದ ಸ್ಥಾನದಲ್ಲಿದ್ದಾರೆ.

ಇದು ಐಪಿಎಲ್ ನಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಮುಂಬೈ ಬ್ಯಾಟ್ಸ್ ಮನ್ ಗಳಿಸಿದ ಎರಡನೇ ಶತಕ. ಇದಕ್ಕೂ ಮೊದಲು ಲೆಂಡ್ಲ್ ಸಿಮನ್ಸ್ 2014 ರಲ್ಲಿ ಮೊಹಾಲಿಯಲ್ಲಿ ಅಜೇಯ 100 ರನ್ ಗಳಿಸಿದ್ದರು.

ಮೂರು ವಿಭಿನ್ನ ಐಪಿಎಲ್ ತಂಡಗಳಿಗೆ ಶತಕ ಗಳಿಸಿದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್‌ಗಳ ಪಟ್ಟಿಗೆ ಡಿ ಕಾಕ್ ಸೇರ್ಪಡೆಗೊಂಡಿದ್ದು, ಕೆಎಲ್ ರಾಹುಲ್ (ಪಿಬಿಕೆಎಸ್, ಎಲ್‌ಎಸ್‌ಜಿ, ಡಿಸಿ) ಮತ್ತು ಸಂಜು ಸ್ಯಾಮ್ಸನ್ (ಡಿಡಿ, ಆರ್‌ಆರ್, ಸಿಎಸ್‌ಕೆ) ಜೊತೆಗೆ ಕ್ವಿಂಟನ್ ಡಿ ಕಾಕ್ (ಡಿಡಿ, ಎಲ್‌ಎಸ್‌ಜಿ, ಎಂಐ) ಅವರನ್ನು ಸೇರಿಕೊಂಡಿದ್ದಾರೆ.

ಪಂಜಾಬ್ ಕಿಂಗ್ಸ್ ಪರ 25 ನೇ ವಯಸ್ಸಿನಲ್ಲಿ 50+ ರನ್ ಗಳಿಸಿದ ದಾಖಲೆಯನ್ನು ಪ್ರಭ್ಸಿಮ್ರಾನ್ ಸಿಂಗ್ ಹೊಂದಿದ್ದಾರೆ. ಅವರು 10 ಬಾರಿ 50 ಅಥವಾ ಅದಕ್ಕಿಂತ ಹೆಚ್ಚು ರನ್ ಗಳಿಸಿದ್ದಾರೆ. ಇದರಲ್ಲಿ ಅವರು ಡೇವಿಡ್ ಮಿಲ್ಲರ್ (9) ಮತ್ತು ಶಾನ್ ಮಾರ್ಷ್ (6) ಅವರನ್ನು ಹಿಂದಿಕ್ಕಿದ್ದಾರೆ.

ಅರ್ಶದೀಪ್ ಸಿಂಗ್ ಐಪಿಎಲ್‌ನಲ್ಲಿ 100 ವಿಕೆಟ್‌ಗಳನ್ನು ಪೂರೈಸಿದರು. ಮೊದಲ ಎಸೆತದಲ್ಲೇ ರಯಾನ್ ರಿಕಲ್ಟನ್ ಅವರನ್ನು ಔಟ್ ಮಾಡಿದರು. ಲೆಗ್ ಸೈಡ್‌ನಲ್ಲಿ ಶಶಾಂಕ್ ಸಿಂಗ್ ಬೌಲಿಂಗ್‌ನಲ್ಲಿ ರಿಕಲ್ಟನ್‌ಗೆ ಕ್ಯಾಚ್ ನೀಡಿದರು. ಮುಂದಿನ ಎಸೆತದಲ್ಲಿ ಸೂರ್ಯಕುಮಾರ್ ಯಾದವ್ ಕೂಡ ಔಟ್ ಆದರು. ಚಹಾಲ್ ಸೂರಿ ಬೌಲಿಂಗ್‌ನಲ್ಲಿ ಕ್ಯಾಚ್ ಪಡೆದರು.

ಇದರೊಂದಿಗೆ, ಅರ್ಶದೀಪ್ ಐಪಿಎಲ್‌ನಲ್ಲಿ 100 ಅಥವಾ ಅದಕ್ಕಿಂತ ಹೆಚ್ಚು ವಿಕೆಟ್ ಪಡೆದ ಪ್ರಮುಖ ಎಡಗೈ ವೇಗದ ಬೌಲರ್‌ಗಳ ಪಟ್ಟಿಗೆ ಸೇರಿದ್ದಾರೆ. ಈ ಪಟ್ಟಿಯಲ್ಲಿ ಟ್ರೆಂಟ್ ಬೌಲ್ಟ್ (144), ಜಯದೇವ್ ಉನಾದ್ಕಟ್ (114), ಆಶಿಶ್ ನೆಹ್ರಾ (106) ಮತ್ತು ಜಹೀರ್ ಖಾನ್ (102) ಸೇರಿದ್ದಾರೆ.

ಪಂಜಾಬ್ ಕಿಂಗ್ಸ್ ಪರ 100 ವಿಕೆಟ್ ಪಡೆದ ಮೊದಲ ಬೌಲರ್ ಅರ್ಶ್ದೀಪ್. ಇದಕ್ಕೂ ಮೊದಲು, ತಂಡಕ್ಕೆ ಅತಿ ಹೆಚ್ಚು ವಿಕೆಟ್ ಪಡೆದವರು ಪಿಯೂಷ್ ಚಾವ್ಲಾ (84). ಐಪಿಎಲ್‌ನಲ್ಲಿ 11 ಇನ್ನಿಂಗ್ಸ್‌ಗಳ (21.1 ಓವರ್‌ಗಳು) ನಂತರ ಪವರ್‌ಪ್ಲೇನಲ್ಲಿ ಇದು ಅವರ ಮೊದಲ ವಿಕೆಟ್ ಆಗಿತ್ತು. ಟಿ20 ಕ್ರಿಕೆಟ್‌ನಲ್ಲಿ 9 ಪಂದ್ಯಗಳ ನಂತರ ಪವರ್‌ಪ್ಲೇನಲ್ಲಿ ಇದು ಅವರ ಮೊದಲ ವಿಕೆಟ್ ಆಗಿದೆ.

# ಪಶ್ಚಿಮ ಪಾಲಿಕೆ ಆಯುಕ್ತರಿಂದ ಕಾಮಗಾರಿಗಳ ಪರಿಶೀಲನೆ



**ಬೆಂಗಳೂರು: ಏ–17–**ಪಶ್ಚಿಮ ನಗರ ಪಾಲಿಕೆಯ ಆಯುಕ್ತರಾದ ಡಾ. ರಾಜೇಂದ್ರ ಕೆ.ವಿ ಅವರು ಇಂದು ಪದ್ಮನಾಭನಗರ ವಿಭಾಗದಲ್ಲಿ ವಿವಿಧ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದರು.

ಪ್ರಸ್ತಾಪಿತ ಅಗಲೀಕರಣಗೊಂಡ ಇಟ್ಟಮಡು ರಸ್ತೆ, ವಾರ್ಡ್ ರಸ್ತೆಗಳ ಸ್ವಚ್ಛತೆ ಹಾಗೂ ಭಾರತ ಜನಗಣತಿ 2027ಕ್ಕೆ ಸಂಬಂಧಿಸಿದ ಸಿದ್ಧತೆಗಳನ್ನು ಅವರು ಸಮಗ್ರವಾಗಿ ಪರಿಶೀಲಿಸಿದರು. ಹೊಸಕೆರೆಹಳ್ಳಿ ವಾರ್ಡ್‌ನಲ್ಲಿ ಗಣತಿದಾರರು ಹಾಗೂ ಮೇಲ್ವಿಚಾರಕರೊಂದಿಗೆ ಬ್ಲಾಕ್‌ವಾರು ಮನೆಗಳಿಗೆ ಭೇಟಿ ನೀಡಿ, ಜನಗಣತಿ ಕಾರ್ಯಗಳ ಪ್ರಗತಿ ಮತ್ತು ವ್ಯವಸ್ಥೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಉಪ ಆಯುಕ್ತ (ಆಡಳಿತ) ಸಾಯಿದಾ ಆಫ್ರಿನ್ ಭಾನು, ಅಧೀಕ್ಷಕ ಅಭಿಯಂತರ ಜಯಶಂಕರ್, ವಿಭಾಗದ ಕಾರ್ಯಪಾಲಕ ಅಭಿಯಂತರರು, ಕಂದಾಯಾಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.ಸ್ಥಳ ಪರಿಶೀಲನೆ ವೇಳೆ ಆಯುಕ್ತರು ರಸ್ತೆ ಅಗಲೀಕರಣ ಹಾಗೂ ಸ್ವಚ್ಛತಾ ಕಾರ್ಯಗಳನ್ನು ಇನ್ನಷ್ಟು ವೇಗವಾಗಿ ಮತ್ತು ಸಮರ್ಪಕವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜನಗಣತಿ ಕಾರ್ಯವನ್ನು ನಿರ್ವಿಘ್ನವಾಗಿ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮಾರ್ಗದರ್ಶನ ನೀಡಿದರು.

# ಸಿಎಂ ವಿರುದ್ಧ ರಾಜಣ್ಣ ಅಸಮಾಧಾನ



**ಬೆಂಗಳೂರು, ಏ. 17–** ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುತ್ತಿದ್ದರೂ ಮುಖ್ಯಮಂತ್ರಿಗಳು ಅಸಹಾಯಕರಂತೆ ಇರುವುದಕ್ಕೆ ಮಾಜಿ ಸಚಿವ ಕೆ.ಎನ್. ರಾಜಣ್ಣ ಅಸಮಾಧಾನ ಹೊರಹಾಕಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ಧಿಗಾರರೊಂದಿಗೆ ಮಾತನಾಡಿದ ರಾಜಣ್ಣ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಶಾಸಕರುಗಳು, ಸಚಿವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ. ಇಷ್ಟಾದರೂ ಮುಖ್ಯಮಂತ್ರಿಗಳು ಸುಮ್ಮನಿರುವುದು ಬೇಸರ ತರಿಸಿದೆ ಎಂದು ಹೇಳಿದರು.

ಇತ್ತೀಚೆಗೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಜೀರ್ ಅಹಮದ್ ಅವರನ್ನು ವಜಾ ಮಾಡಲಾಗಿತ್ತು. ಹಾಗೆಯೇ ವಿಧಾನಪರಿಷತ್ ಸದಸ್ಯರಾಗಿದ್ದ ಜಬ್ಬಾರ್ ಅವರನ್ನು ಪಕ್ಷದಿಂದ ಅಮಾನತು ಮಾಡಲಾಗಿತ್ತು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಪಕ್ಷ ವಿರೋಧಿ ಕೆಲಸ ಮಾಡಿದ ಆರೋಪದ ಮೇಲೆ ಇವರುಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗಿತ್ತು.

ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧವೂ ಶಿಸ್ತು ಕ್ರಮ ಜರುಗಿಸುವಂತೆ ಹೈಕಮಾಂಡ್ ಮೇಲೆ ಒತ್ತಡಗಳು ಹೆಚ್ಚಿವೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಆಪ್ತ ಬಳಗದಲ್ಲೇ ಗುರುತಿಸಿಕೊಂಡಿರುವ ಕೆಲ ಶಾಸಕರು, ಸಚಿವರುಗಳು ಇಷ್ಟೆಲ್ಲಾ ಆಗುತ್ತಿದ್ದರೂ ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾತ್ರ ಮೌನವಾಗಿರುವುದಕ್ಕೆ ಅಸಮಾಧಾನ ಹೊರಹಾಕಿದ್ದಾರೆ ಎಂದು ಹೇಳಲಾಗಿದೆ.

# ಸಿಎಂ, ಡಿಸಿಎಂ ದೆಹಲಿಗೆ ಗೊಂದಲ ನಿವಾರಣೆಗೆ ಹೈಕಮಾಂಡ್ ಭೇಟಿ



**ಬೆಂಗಳೂರು, ಏ. 17–** ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರ ಬೂದಿ ಮುಚ್ಚಿದ ಕೆಂಡದಂತಿದ್ದು, ಸಂಪುಟ ಪುನಾರಚನೆ ಕೂಗು ಬಲವಾಗಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ದೆಹಲಿಗೆ ತೆರಳಿದ್ದು, ವರಿಷ್ಠರನ್ನು ಭೇಟಿ ಮಾಡಿ ರಾಜ್ಯ ಕಾಂಗ್ರೆಸ್‌ನಲ್ಲಿರುವ ಗೊಂದಲಗಳ ನಿವಾರಣೆ ಸಂಬಂಧ ಚರ್ಚಿಸುವ ಸಾಧ್ಯತೆಗಳಿವೆ.

ರಾಜ್ಯದ ಐಟಿಬಿಟಿ ಇಲಾಖೆ ದೆಹಲಿಯಲ್ಲಿ ಇಂದು ಸಂಜೆ ಆಯೋಜಿಸುವ ವಿವಿಧ ದೇಶಗಳ ರಾಯಭಾರಿಗಳ ಸಮಾವೇಶವಾದ ಬ್ರಿಡ್ಜ್–2 ಬೆಂಗಳೂರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಮಧ್ಯಾಹ್ನ ದೆಹಲಿಗೆ ಪ್ರಯಾಣ ಬೆಳೆಸಿದರು.

ರಾಜ್ಯದಲ್ಲಿ ಉಪಚುನಾವಣೆಗಳು ಮುಗಿಯುತ್ತಿದ್ದಂತೆಯೇ ರಾಜ್ಯ ಕಾಂಗ್ರೆಸ್‌ನಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಸಂಪುಟ ಪುನಾರಚನೆಗೆ ಆಗ್ರಹಿಸಿ ಸುಮಾರು 15 ಕ್ಕೂ ಹೆಚ್ಚು ಹಿರಿಯ ಕಾಂಗ್ರೆಸ್ ಶಾಸಕರು ಕಳೆದ ನಾಲ್ಕು ದಿನಗಳಿಂದ ದೆಹಲಿಯಲ್ಲೇ ಮೊಕ್ಕಾಂ ಹೂಡಿದ್ದರೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಳೆದ 3 ದಿನಗಳ ಹಿಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಸ್ಪಷ್ಟ ನಿಲುವು ಪ್ರಕಟಿಸುವಂತೆ ಆಗ್ರಹಿಸಿದ್ದರು. ಈ ಎಲ್ಲ ಬೆಳವಣಿಗೆಗಳ ನಡುವೆಯೇ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು ದೆಹಲಿಗೆ ತೆರಳಿದ್ದು, ವರಿಷ್ಠ ನಾಯಕರನ್ನು ಭೇಟಿ ಮಾಡುವ ಸಾಧ್ಯತೆಇದೆ.
ರಾಜ್ಯದ ಐಟಿ ಇಲಾಖೆಯ ಕಾರ್ಯಕ್ರಮ ಮುಗಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇವರುಗಳು ಪ್ರತ್ಯೇಕವಾಗಿ ವರಿಷ್ಠ ನಾಯಕರುಗಳನ್ನು ಭೇಟಿ ಮಾಡಿ ಚರ್ಚೆ ನಡೆಸುವರು ಎಂದು ಹೇಳಲಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷವಾಗುತ್ತಿದ್ದು, ಸಂಪುಟ ಪುನಾಚರನೆಗೆ ಹಿರಿಯ, ಕಿರಿಯ ಶಾಸಕರು ಒತ್ತಾಯಿಸುತ್ತಿದ್ದಾರೆ. ಇದಕ್ಕೆ ಅವಕಾಶ ಕೊಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವರಿಷ್ಠರ ಬಳಿ ಸಂಪುಟ ಪುನಾರಚನೆಗೆ ಅನುಮತಿ ಕೇಳುವ ಸಾಧ್ಯತೆ ಹೆಚ್ಚಿದೆ.

ನಾಯಕತ್ವ ಬದಲಾವಣೆ ವಿಚಾರ ಇತ್ಯರ್ಥವಾಗದೆ ಸಂಪುಟ ಪುನಾರಚನೆಗೆ ಅವಕಾಶ ಕೊಡಬಾರದು. ಮೊದಲು ನಾಯಕತ್ವ ಬದಲಾವಣೆ ವಿಚಾರವನ್ನು ಇತ್ಯರ್ಥಗೊಳಿಸಿ ಎಂದು ಉಪಮುಖ್ಯಮಂತ್ರಿಡಿ.ಕೆ. ಶಿವಕುಮಾರ್ ತಮ್ಮ ಅಹವಾಲನ್ನು ವರಿಷ್ಠರ ಬಳಿ ಮತ್ತೆ ಇಂದೂ ಸಹ ಮಂಡಿಸಲುವ ಎಂದು ಹೇಳಲಾಗಿದೆ.
ರಾಜ್ಯ ಕಾಂಗ್ರೆಸ್‌ನಲ್ಲಿ ಕಳೆದ ಅಕ್ಟೋಬರ್‌ನಲ್ಲೆ ನಾಯಕತ್ವ ಬದಲಾವಣೆ ವಿಚಾರ ಬದಾವಣೆ ಮುನ್ನಲೆಗೆ ಬಂದು, ಪರ ವಿರೋಧ ಹೇಳಿಕೆಗಳು, ಸಚಿವರು ಹಾಗೂ ಶಾಸಕರುಗಳ ಡಿನ್ನರ್ ಸಭೆಗಳು ನಡೆದಿದ್ದು, ಕಾಂಗ್ರೆಸ್‌ನಲ್ಲಿ ಗೊಂದಲಗಳು ಸೃಷ್ಟಿಯಾಗಿತ್ತು.

ಹೈಕಮಾಂಡ್ ಮಾತ್ರ ಈ ಬಗ್ಗೆ ಯಾವುದೇ ತೀರ್ಮಾನ ಕೈಗೊಳ್ಳದೆ ಗೊಂದಲಗಳನ್ನು ಪರಿಹರಿಸುವ ಗೋಜಿಗೂ ಹೋಗಿರಲಿಲ್ಲ.

ಬಜೆಟ್ ಅಧಿವೇಶನ, ಉಪಚುನಾವಣೆಯ ಕಾರಣದಿಂದ ಯಾವುದೂ ಇತ್ಯರ್ಥವಾಗಿರಲಿಲ್ಲ. ಈಗ ಮತ್ತೆ ಈ ವಿಚಾರಗಳು ಕಾಂಗ್ರೆಸ್‌ನ ಆಂತರಿಕ ವಲಯದಲ್ಲಿ ಸದ್ದು ಮಾಡುತ್ತಿದ್ದು, ಕಾಂಗ್ರೆಸ್ ಹೈಕಮಾಂಡ್ ಈ ವಿಚಾರಗಳ ಬಗ್ಗೆ ಒಂದು ಸ್ಪಷ್ಟತೆಗೆ ಬರುವ ಅನಿವಾರ್ಯತೆ ಸೃಷ್ಟಿಯಾಗಿದೆ. ಹಾಗಾಗಿ ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿಡಿ.ಕೆ. ಶಿವಕುಮಾರ್ ರವರ ಬಳಿ ಚರ್ಚಿಸಿ ಸದ್ಯದಲ್ಲೇ ರಾಜ್ಯ ಕಾಂಗ್ರೆಸ್‌ನ ಗೊಂದಲಗಳಿಗೆ ತೆರೆ ಎಳೆಯುವ ಸಾಧ್ಯತೆ ಇವೆ.

# ಭಾರತೀಯ ಸ್ಟೇಟ್ ಬ್ಯಾಂಕ್‌ನಲ್ಲಿಡಾ. ಅಂಬೇಡ್ಕರ್ ಜಯಂತಿ ಆಚರಣೆ




**ಬೀದರ್:ಏ.17:** ನಗರದ ಶಿವಾಜಿ ವೃತ್ತದಲ್ಲಿರುವ ಬೀದರ್ ವಲಯದ ಭಾರತೀಯ ಸ್ಟೇಟ್ ಬ್ಯಾಂಕ್‌ನಲ್ಲಿ ಭಾರತ ಸಂವಿಧಾನದ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಪ್ರಾದೇಶಿಕ ವ್ಯವಸ್ಥಾಪಕ ಶ್ರೀ ಜಯಕುಮಾರ ಅವರು ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ದೇಶಕ್ಕೆ ನೀಡಿದ ಕೊಡುಗೆಗಳನ್ನು ವರ್ಣಿಸಲು ಇಡೀ ವರ್ಷ ಮಾತನಾಡಿದರೂ ಕಡಿಮೆ ಎಂದ ಅವರು, ಕನಿಷ್ಠ ಅವರ ಜಯಂತಿ ದಿನದಂದಾದರೂ ಅವರು ನಡೆದು ಬಂದ ಮಾರ್ಗದಲ್ಲಿ ಸಾಗುವ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು. ಪರಮೇಶ ರೆಡ್ಡಿ ಅವರು ಡಾ. ಅಂಬೇಡ್ಕರ್ ಅವರ ಹೋರಾಟಮಯ ಜೀವನ, ಸಾಮಾಜಿಕ ನ್ಯಾಯಕ್ಕಾಗಿ ನಡೆಸಿದ ಹೋರಾಟ ಹಾಗೂ ದೇಶದ ಅಭಿವೃದ್ಧಿಗೆ ನೀಡಿದ ಅಮೂಲ್ಯ ಸೇವೆಗಳ ಕುರಿತು ಮಾತನಾಡಿದರು.ಕಾರ್ಯಕ್ರಮದಲ್ಲಿ ಅಶೋಕ ಮಾಲಿ ಬಿರಾದಾರ, ಶೇಶಿಕಾಂತ ಕಾಳೆ, ಜಗದೀಶ ಬಡಿಗೇರ, ಚಿಂತಾಮಣಿ, ನಾಗೇಂದ್ರಕುಮಾರ, ಮನೋಜಕುಮಾರ ದುಬ್ಬೆ, ಚಂದ್ರಶೇಖರ, ರವಿನಾಯಕ, ರಾಘವೇಂದ್ರ, ಶಿವಕುಮಾರ, ಅನೀಲ ಸಿಂಧೆ, ಅರವಿಂದ, ಸಂಜು ಕಾಂಬಳೆ, ಸುನೀಲ, ಕಿರಣಕುಮಾರ ಕುಂದೆ, ಅಶ್ವಿನಿ, ವಿದ್ಯಾ, ವಿಜಯಕುಮಾರ ಬಡಿಗೇರ ಹಾಗೂ ಕೃಷ್ಣಮೂರ್ತಿ ಬಡಿಗೇರ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.
ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಎನ್. ಮೂರ್ತಿ ವಹಿಸಿದ್ದರು. ಭಾರತೀಯ ಸ್ಟೇಟ್ ಬ್ಯಾಂಕ್ ಎಸ್.ಸಿ/ಎಸ್.ಟಿ ಕ್ಷೇಮಾಭಿವೃದ್ಧಿ ಸಂಘದ ಸಹಾಯಕ ಪ್ರಧಾನ ಕಾರ್ಯದರ್ಶಿ ರಮೇಶ್ ಶಿಂಧೆ ಅವರು ಸ್ವಾಗತಿಸಿದ್ದರು. ಅಶೋಕ ಮಾಲಿ ಬಿರಾದಾರ ವಂದಿಸಿದರೆ, ಶೇಶಿಕಾಂತ ಕಾಳೆ ನಿರೂಪಿಸಿದರು.

# ಬಾಲ ಭವನದಿಂದ ಬೇಸಿಗೆ ಶಿಬಿರ ಆಯೋಜನೆ

**ರಾಯಚೂರು:** ಜಿಲ್ಲಾ ಬಾಲ ಭವನ ರಾಯಚೂರು ವತಿಯಿಂದ 2026–27ನೇ ಸಾಲಿನ 05 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಯೋಗ, ಮೆಹಂದಿ, ಸಂಗೀತ, ಸಾಮೂಹಿಕ ನೃತ್ಯ, ಚಿತ್ರಕಲೆ, ಕರ ಕುಶಲಕಲೆ ಬೇಸಿಗೆ ಶಿಬಿರ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೋರಲಾಗಿದೆ.
ಕಾರ್ಯಕ್ರಮಗಳು ದಿನಾಂಕ: 21–04–2026 ರಿಂದ 06–05–2026ರವರೆಗೆ 15 ದಿನಗಳ ಕಾಲ ಬೆಳಗ್ಗೆ 10ಗಂಟೆಗೆ ರಾಯಚೂರು ತಾಲೂಕಿನ ಕಲವಲದೊಡ್ಡಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಮಾಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿಷ್ಠಿತ ಶಾಲೆಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು:** ಸಮಾಜ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ಕಲ್ಪಿಸಲು ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
ಆಸಕ್ತರು ಅರ್ಜಿಯನ್ನು ಮೇ.04ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ ವಿಳಾಸ: ತಿತಿತಿ.ತಿ.ಇಚಿಡಿ.ಟುಭಿ.ಎಟ ಅನ್ನು ವೀಕ್ಷಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಏಪ್ರಿಲ್ 20ರಂದು ಬಸವ ಜಯಂತಿ

**ರಾಯಚೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಬಸವ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಏಪ್ರಿಲ್ 20ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.
ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.
ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಶರಣ ಭೂಪಾಲ ನಾಡಗೌಡ, ಬಸವ ಕೇಂದ್ರ ಅಧ್ಯಕ್ಷ ರಾಚನಗೌಡ ಕೊಳೂರು, ಅಖಿಲ ಭಾರತ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಮಿರ್ಜಾಪೂರು ಚಂದ್ರಶೇಖರ ಪಾಟೀಲ, ಜಾಗೃತಿ ಲಿಂಗಾಯತ ಮಹಾಸಭಾದ ಅಧ್ಯಕ್ಷ ಜೆ.ಬಸವರಾಜ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.
ಮೈಸೂರಿನ ಶರಣ ಸಾಹಿತಿಗಳಾದ ಶಿವಬುದಿ ಹಲ್ಲರೆ ಅವರು ಬಸವ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ 18ರಂದು ಗ್ರಾಹಕರ ಸಂವಾದ ಸಭೆ

**ರಾಯಚೂರು:**ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಕಚೇರಿಯಲ್ಲಿ ಏಪ್ರಿಲ್ 18ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1ರವರೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ 18ರಂದು ಮಾಹಿತಿ ಹಕ್ಕು ಕಾಯ್ದೆ ಕುರಿತು ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ

**ರಾಯಚೂರು:** ಮಾಹಿತಿ ಹಕ್ಕು ಕಾಯ್ದೆ ಕುರಿತು ಕಲಬುರಗಿ ಜಿಲ್ಲೆಯ ಜಿಲ್ಲಾ ಮಟ್ಟದ, ತಾಲೂಕು ಮಟ್ಟದ ಹಾಗೂ ನಗರ ಹಾಗೂ ಗ್ರಾಮೀಣ ಪ್ರದೇಶದ ಸ್ಥಳಿಯ ಸಂಸ್ಥೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಏಪ್ರಿಲ್ 18ರ ಶನಿವಾರ ಬೆಳಿಗ್ಗೆ 10ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠ ಹಾಗೂ ಕಲಬುರಗಿ ಜಿಲ್ಲಾಡಳಿತ ವತಿಯಿಂದ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ.
ಕಾರ್ಯಗಾರವನ್ನು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವಿಂಕಟಸಿಂಗ್ ಉದ್ಘಾಟಿಸಲಿದ್ದಾರೆ.
ಮುಖ್ಯ ಅಧಿಕಾರಿಗಳಾಗಿ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರಾದ ಡಾ. ರಿಚರ್ಡ ವಿನ್ಸೆಂಟ್ ಡಿಸೋಜಾ ಹಾಗೂ ಡಾ. ಮಹೇಶ ವಾಲ್ವೇಕರ ಭಾಗವಹಿಸಲಿದ್ದಾರೆ.
ಜಿಲ್ಲಾಧಿಕಾರಿ ಫೌಜಿಯಾ ತರುನ್ನಮ್ಮ ಅವರು ಅಧ್ಯಕ್ಷತೆ ವಹಿಸಲಿದ್ದಾರೆ,
ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಭಂವರ್ ಸಿಂಗ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತರಾದ ಅವಿನಾಶ ಶಿಂಧೆ ಹಾಗೂ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ಅವರು ಭಾಗವಹಿಸಲಿದ್ದಾರೆ.
ಈ ಕಾರ್ಯಗಾರಕ್ಕೆ ಜಿಲ್ಲಾ, ತಾಲ್ಲೂಕ ಮಟ್ಟದ ಅಧಿಕಾರಿಗಳು ಹಾಗೂ ನಗರ, ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ತಪ್ಪದೆ ಭಾಗವಹಿಸುವಂತೆ ಮಾಹಿತಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಟೋ ಚಾಲಕರಿಗೆ ಸರಿಯಾಗಿ ನಿಲ್ಲಿಸಲು ಭರತ್ ರೆಡ್ಡಿ ಎಚ್ಚರಿಕೆ



**ಬಳ್ಳಾರಿ, ಏ.17:** ನಗರದ ಗಡಿಗಿ ಚೆನ್ನಪ್ಪ ಸರ್ಕಲ್ ನಲ್ಲಿ ನಿನ್ನೆ ನಗರ ಶಾಸಕ ನಾರಾ ಭರತ್ ರೆಡ್ಡಿ ಸರ್ಕಲ್ ಸುತ್ತಮುತ್ತ ಎಲ್ಲಂದರಲ್ಲಿ ನಿಲ್ಲಿಸುವ ಆಟೋ ಚಾಲಕರನ್ನು ಕರೆದು. ನಿಗಧಿತ ಸ್ಥಳದಲ್ಲಿ ಮಾತ್ರ ನಿಲ್ಲಿಸಬೇಕು. ಎಲ್ಲಂದರಲ್ಲಿ ನಿಲ್ಲಿಸ ಬಾರದು ಎಂದು ಎಚ್ಚರಿಕೆ ನೀಡಿದರು

ಸರ್ಕಲ್ ನಲ್ಲಿ ಸಂಚಾರಿ ವ್ಯವಸ್ಥೆಯ ಅಸ್ತವ್ಯಸ್ತತೆಯ ಬಗ್ಗೆ ಖುದ್ದು ವೀಕ್ಷಿಸಿದ ಶಾಸಕರು, ಪಾಲಿಕೆಯ ಆಯುಕ್ತರು, ಅಧಿಕಾರಿಗಳು ಹಾಗೂ ಸಂಚಾರಿ ಪೊಲೀಸರನ್ನು ಕರೆದು. ಜನ ಮತ್ತು ವಾಹನಗಳ ಸಂಚಾರ ಸುಗಮವಾಗಿ ಸಾಗಲಿ ಎಂದು ಸರ್ಕಲ್ ನ ಅಗಲೀಕರಣ ಮಾಡಿದೆ. ಆದರೂ ಆಟೋಗಳು ಸರ್ಕಲ್ ಸುತ್ತ ಎಲ್ಲಂದರಲ್ಲಿ ವಾಹನಗಳ ಓಡಾಟಕ್ಕೆ ಅಡ್ಡಿಯಾಗುವಂತೆ ನಿಲ್ಲಿಸುವುದು ಸರಿಯಲ್ಲ. ವ್ಯವಸ್ಥಿತವಾಗಿ ನಿಲ್ಲಿಸಲು ಸೂಚಿಸಿ. ಮೀರಿದವರ ಮೇಲೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳಿ ಎಂದು ಹೇಳಿದರು. ಆಟೋದವರನ್ನು ಕರೆದು ಸುಗಮ ಸಂಚಾರಕ್ಕೆ ಸಹಕಾರ ನೀಡಬೇಕೆಂದು ಸೂಚಿಸಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE